ಸಂಪುಟ : 9 ಸಂಚಿಕೆ 307 ಪುಟ : 4+2 ಬೆಲೆ: 3.00 ಮಂಗಳವಾರ ಜನವರಿ 21 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 307 Pages : 4+2 Price : 3.00 Tuesday January 21 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ನಾಯಿಗಳ ಮಾಲೀಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಬರುವ ನಾಯಿಗಳ ಮಾಲೀಕರಿಗೆ ತಿಳಿಯಪಡಿಸುವುದೇನೆಂದರೆ ಗದಗ-ಬೆಟಗೇರಿ ನಗರಸಭೆಯ ವ್ಯಾಪ್ತಿಯಲ್ಲಿ ಬೀದಿ ನಾಯಿಗಳಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗಿರುವುದಾಗಿ ಹಾಗೂ ಅದರಿಂದ ಅವಘಡಗಳು ಹಾಗೂ ಅಪಾಯಗಳು ಜರುಗುತ್ತಿದ್ದು ಈ ಕುರಿತು ನಗರಸಭೆ ಕಾರ್ಯಾಲಯಕ್ಕೆ ಸಾಕಷ್ಟು ಸಾರ್ವಜನಿಕ ದೂರುಗಳು ಸ್ವೀಕೃತವಾಗಿವೆ.

ಬೀದಿ ನಾಯಿಗಳ ಸಂಖ್ಯೆಯನ್ನು ಕಡಿಮೆಗೊಳಿಸಲು ಬೀದಿ ನಾಯಿಗಳನ್ನು ಹಿಡಿದು ಮತ್ತು ಅವುಗಳಿಗೆ ಸಂತಾನ ಹರಣ ಚಿಕಿತ್ಸೆ ಮತ್ತು ಆಂಟಿ ರೇಬಿಸ್ ವ್ಯಾಕ್ಸಿನೇಷನ್ ಹಾಕುವ ಕಾರ್ಯವನ್ನು ಕೈಗೊಳ್ಳಲು ನಗರಸಭೆ ಠರಾವು ದಿನಾಂಕ:-05-08-2024ರ ಪ್ರಕಾರ ತೀರ್ಮಾನಿಸಲಾಗಿದ್ದು ಅದರಂತೆ ದಿನಾಂಕ:-22-01-2025 ರಿಂದ ಗದಗ-ಬೆಟಗೇರಿ ನಗರಸಭೆ ವತಿಯಿಂದ ಬೀದಿ ನಾಯಿಗಳನ್ನು ಹಿಡಿಯುವ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಗಿದೆ. ಒಂದು ವೇಳೆ ನಾಯಿಗಳ ಮಾಲೀಕರು ತಮ್ಮ ಸಾಕಿದ ನಾಯಿಗಳನ್ನು ಬೀದಿಯಲ್ಲಿ ಬಿಟ್ಟ ಪಕ್ಷದಲ್ಲಿ ಸಾಕಿದ ನಾಯಿಗಳನ್ನು ಜನವರಿ 23 ರೊಳಗಾಗಿ ತಮ್ಮ ತಾಬಾಕ್ಕೆ ಕಟ್ಟಿಹಾಕಿಕೊಳ್ಳತಕ್ಕದ್ದು. ತಪ್ಪಿದ್ದಲ್ಲಿ ಮುಂದೆ ಆಗು-ಹೋಗುವ ಹಾನಿಗಳಿಗೆ ಗದಗ-ಬೆಟಗೇರಿ ನಗರಸಭೆ ಜವಬ್ದಾರಿಯಾಗಿರುವುದಿಲ್ಲ ಎಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗಜೇಂದ್ರಗಡದಲ್ಲಿ 10ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

# ಕನ್ನಡ ಮಾಧ್ಯಮ ಕೃಪಾಂಕ ಕುರಿತು ಚರ್ಚೆಗೆ ಸಿದ್ಧ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಕನ್ನಡಿಗರಿಗೆ ಉದ್ಯೋಗದಲ್ಲಿ ಗ್ರಾಮೀಣ ಕೃಪಾಂಕದಂತೆ, ಕನ್ನಡ ಮಾಧ್ಯಮ ಕೃಪಾಂಕ ನೀಡುವ ಕುರಿತು ಸಮ್ಮೇಳನದಲ್ಲಿ ನಿರ್ಣಯ ಕೈಗೊಂಡು ಸರ್ಕಾರಕ್ಕೆ ಕೋರಿದಲ್ಲಿ, ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರೊಂದಿಗೆ ಚರ್ಚಿಸಲು ಸಿದ್ಧ ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ಜಿಲ್ಲೆಯ ಗಜೇಂದ್ರಗಡ ಪಟ್ಟಣದಲ್ಲಿ ಸೋಮವಾರ ಜರುಗಿದ 10ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.

ಆಂಗ್ಲ ಭಾಷೆಯ ಹೆಚ್ಚಿನ ಪ್ರಭಾವದಲ್ಲಿ ಕನ್ನಡ ಭಾಷೆ ಸಮಸ್ಯೆ ಎದುರಿಸುತ್ತಿದೆ. ಇಂತಹ ಸವಾಲುಗಳ ನಡುವೆ ಕನ್ನಡ ಭಾಷೆ ಅಭಿವೃದ್ಧಿಗೆ, ಪರಿಹಾರ ಕಂಡುಕೊಳ್ಳುವ ಅಗತ್ಯತೆ ಇದೆ. ಕನ್ನಡ ಭಾಷಾ ಅಭಿವೃದ್ಧಿ, ಪ್ರಾಚ್ಯಾವಶೇಷ ಸಂಶೋಧನೆ, ಜಿಲ್ಲೆಯ ಸಾಹಿತ್ಯ, ಪ್ರಾಚ್ಯವಸ್ತು, ಶಾಸನ, ಜಿಲ್ಲೆಯ ಸಮಗ್ರ ಮಾಹಿತಿಗಳನ್ನು ಒಳಗೊಂಡ ಜಿಲ್ಲೆಯ ಅಂತರ್ಜಾಲ ಸೃಷ್ಟಿಸಲು ಜಿಲ್ಲಾ ಮಟ್ಟದ ಸಮಿತಿ ರಚನೆ ಮಾಡಲು ಈಗಾಗಲೇ ನಿರ್ಣಯಿಸಲಾಗಿದೆ. ಜಿಲ್ಲೆಯು ರಾಜ್ಯದ ಸಾಂಸ್ಕೃತಿಕ ರಾಜಧಾನಿ ಆಗಲು ಇದೊಂದು ಮಹತ್ವದ ಬೆಳವಣಿಗೆ ಆಗಲಿದೆ ಎಂದರು.



ಸಾಹಿತ್ಯ ಸಮ್ಮೇಳನದ ಹಿಂದಿನ ಇತಿಹಾಸವನ್ನು ಪದೇ ಪದೇ ನವ ಪೀಳಿಗೆಗಳಿಗೆ ಹೇಳುತ್ತಿರಬೇಕು. ಕನ್ನಡತನವು ಸಾಹಿತ್ಯ, ಸಂಗೀತ, ಕ್ರೀಡಾ, ಸಾಂಸ್ಕೃತಿಕವಾಗಿ ಶ್ರೀಮಂತವಾಗಲು ಗದಗ ಜಿಲ್ಲೆಯ ಕೊಡುಗೆ ಅಪಾರವಾಗಿದೆ. ಗದಗ ಜಿಲ್ಲೆಯ ರೋಣ ಹಾಗೂ ಗಜೇಂದ್ರಗಡ ಪಟ್ಟಣಗಳು ಜಿಲ್ಲೆಯ ಹಿರಿಮೆಯನ್ನು ಹೆಚ್ಚಿಸಿವೆ. ಕುಮಾರವ್ಯಾಸ, ನಯಸೇನ, ದುರ್ಗಸಿಂದ, ಭೀಮಸೇನ ಜೋಶಿ ಸೇರಿದಂತೆ ಅನೇಕ ಮಹನೀಯರಿಂದ ಈ ನಾಡು ಮತ್ತಷ್ಟು ಗರಿಮೆ ಹೊಂದುವಂತೆ ಮಾಡಿದೆ ಡಾ. ಎಚ್.ಕೆ. ಪಾಟೀಲ ತಿಳಿಸಿದರು.

ಸ್ವಾತಂತ್ರ್ಯ ಹೋರಾಟ, ಗೋವಾ ವಿಮೋಚನಾ ಚಳುವಳಿ, ಕರ್ನಾಟಕ ಏಕೀಕರಣ, ನೀರಾವರಿ ಹೋರಾಟದಲ್ಲಿ ಗದಗ ಜಿಲ್ಲೆಯು ಪ್ರಮುಖ ಪಾತ್ರ ವಹಿಸಿದೆ. ಜಿಲ್ಲೆಯು ಹಲವು ವೈಶಿಷ್ಟ್ಯತೆಗಳಿಂದ ದೇಶದಲ್ಲಿ ಗುರುತಿಸಿಕೊಂಡಿದೆ. ಜಿಲ್ಲೆಯಲ್ಲಿ ಶಿಲಾಯುಗದ 20ಕ್ಕೂ ಹೆಚ್ಚು ಸ್ಥಳಗಳು ಸಂಶೋಧನೆಗಳಿಂದ ಬೆಳಕಿಗೆ ಬಂದಿದ್ದು, ಜಿಲ್ಲೆಯ ಇತಿಹಾಸವನ್ನು ಲಕ್ಷಕ್ಕೂ ಅಧಿಕ ವರ್ಷಗಳ ಹಿಂದಕ್ಕೆ ತೆಗೆದುಕೊಂಡು ಹೋಗುತ್ತದೆ. 1961ರಲ್ಲಿ ಗದಗ ಜಿಲ್ಲೆಯಲ್ಲಿ ನಡೆದ ರಾಜ್ಯ ಸಾಹಿತ್ಯ ಸಮ್ಮೇಳನದಲ್ಲಿ ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣ ಮಾಡು ಮೊದಲ ಬಾರಿ ಹಕ್ಕೊತ್ತಾಯ ಮಾಡಲಾಯಿತು ಎಂದರು.

> ರೋಣ ಮತ್ತು ಗಜೇಂದ್ರಗಡ ತಾಲೂಕುಗಳಿಗೆ ಮಲಪ್ರಭಾ ನದಿ ನೀರು ಸಂಪರ್ಕಿಸಬಹುದು. ಈ ನಿರ್ಣಯಕ್ಕೆ ನಾನು ಕಟಿಬದ್ಧನಾಗಿದ್ದೇನೆ. ಗದಗ- ವಾಡಿ ರೈಲು ಮಾರ್ಗ ಕಾರಣಾಂತರಗಳಿಂದ ಬದಲಾಗಿದೆ. ಮೂಲ ಯೋಜನೆ ಬಗ್ಗೆ ಸಮ್ಮೇಳನದಲ್ಲಿ ನಿರ್ಣಯ ಕೈಗೊಂಡು ಸಚಿವರಿಗೆ, ಸರ್ಕಾರಕ್ಕೆ ಸಲ್ಲಿಸುವ ಅಗತ್ಯವಿದೆ. ರೋಣ, ಗಜೇಂದ್ರಗಡ ಪಟ್ಟಣದಲ್ಲಿ ವಾಸ್ತುಶಿಲ್ಪಗಳ ಕುರುಹುಗಳಿವೆ. ವಾಸ್ತುಶಿಲ್ಪಗಳನ್ನು ಗುರುತಿಸುವ ಕೆಲಸ ಮಾಡಲಾಗಿದೆ. ಅವುಗಳ ರಕ್ಷಣೆ ಮತ್ತು ಅಭಿವೃದ್ಧಿಗೆ ಪ್ರವಾಸೋದ್ಯಮ ಇಲಾಖೆಯಿಂದ ಮುನ್ನುಡಿ ಬರೆಯಲಾಗಿದೆ.
>
> - ಜಿ.ಎಸ್. ಪಾಟೀಲ.
> ಖನಿಜ ನಿಗಮದ ಅಧ್ಯಕ್ಷರು, ರೋಣ ಶಾಸಕರು.

▶▶ 3ನೇ ಪುಟಕ್ಕೆ

## ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜ. 21 ರಂದು ಬೆಳಗಾವಿಯಲ್ಲಿ ಜರುಗುವ ಮಹಾತ್ಮ ಗಾಂಧೀಜಿ ಶತಮಾನೋತ್ಸವ ಕಾರ್ಯಕ್ರಮಕ್ಕೆ ಪ್ರಾಸಂಗಿಕ ಕರಾರಿನ ಮೇಲೆ 200 ವಾಹನಗಳನ್ನು ಗದಗ ಜಿಲ್ಲೆಯ ಸುತ್ತಮುತ್ತಲಿನ ತಾಲೂಕು ಹಾಗೂ ಗ್ರಾಮಗಳ ಸಾರ್ವಜನಿಕರಿಗೆ ಸದರಿ ಕಾರ್ಯಕ್ರಮದ ವೀಕ್ಷಣೆಗೆ ಅನುಕೂಲವಾಗುವಂತೆ ನೀಡಲಾಗುತ್ತಿದೆ. ಜನವರಿ 21 ರಂದು ವಾಹನಗಳ ಕಾರ್ಯಾಚರಣೆ ಕಡಿಮೆಯಾಗುವಂತಹ ಸಾಧ್ಯತೆಗಳು ಹೆಚ್ಚಾಗಿದ್ದು ಸದರಿ ದಿನದಂದು ಬಸ್ ನಿಲ್ದಾಣಗಳಿಂದ ಸುತ್ತಮುತ್ತಲಿನ ಗ್ರಾಮ ಹಾಗೂ ನಗರಗಳಿಗೆ ಪ್ರತಿ ನಿತ್ಯ ಕಾರ್ಯಾಚರಣೆಯಾಗುವ ವಾಹನಗಳ ಸಂಖ್ಯೆ ಕಡಿಮೆಯಾಗುವ ಸಾಧ್ಯತೆಗಳು ಹೆಚ್ಚಾಗಿದ್ದು, ಸಾರ್ವಜನಿಕ ಪ್ರಯಾಣಿಕರು ಹಾಗೂ ಶಾಲಾ ಕಾಲೇಜು ವಿದ್ಯಾರ್ಥಿಗಳು ಸಹಕರಿಸಬೇಕೆಂದು ವಾ.ಕ.ರ.ಸಾ.ಸಂಸ್ಥೆ ಪ್ರಕಟಣೆ ತಿಳಿಸಿದೆ.

### ಗಣರಾಜ್ಯೋತ್ಸವ ದಿನಾಚರಣೆಯ ಪೂರ್ವಸಿದ್ಧತಾ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೂಚನೆ

# ವಹಿಸಿದ ಜವಾಬ್ದಾರಿಯನ್ನು ದಕ್ಷತೆಯಿಂದ ನಿಭಾಯಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜನವರಿ 26ರಂದು ನಡೆಯಲಿರುವ ಗಣರಾಜ್ಯೋತ್ಸವ ದಿನಾಚರಣೆಯ ವ್ಯವಸ್ಥಿತ ಆಚರಣೆಗೆ ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು, ಸಮಿತಿಯವರು ತಮಗೆ ವಹಿಸಿದ ಜವಾಬ್ದಾರಿಯನ್ನು ದಕ್ಷತೆಯಿಂದ ನಿಭಾಯಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಎಲ್ಲ ಇಲಾಖೆಗಳ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜರುಗಿದ ಗಣರಾಜ್ಯೋತ್ಸವ ದಿನಾಚರಣೆಯ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಯಾವುದೇ ಲೋಪದೋಷಗಳಿಗೆ ಆಸ್ಪದ ನೀಡದೇ ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸಬೇಕು. ಗಣರಾಜ್ಯೋತ್ಸವ ದಿನಾಚರಣೆ ಅಂಗವಾಗಿ ಕಾರ್ಯಕ್ರಮದ ಹಿಂದಿನ ದಿನ ಹಾಗೂ ಕಾರ್ಯಕ್ರಮದ ದಿನ ಎರಡು ದಿನಗಳ ಕಾಲ ಸರ್ಕಾರಿ ಕಚೇರಿ ಹಾಗೂ ನಗರದ ವಿವಿಧ ವೃತ್ತಗಳಲ್ಲಿ ಸ್ವಚ್ಛತೆಯೊಂದಿಗೆ ವಿದ್ಯುತ್ ದೀಪಾಲಂಕಾರಕ್ಕೆ ಕ್ರಮ ಕೈಗೊಳ್ಳಬೇಕು. ಗಣರಾಜ್ಯೋತ್ಸವ ದಿನದಂದು ಎಲ್ಲ ಕಚೇರಿ ಮತ್ತು ಶಾಲಾ ಕಾಲೇಜುಗಳ ಸಿಬ್ಬಂದಿ ತಮ್ಮ ಕಾರ್ಯಾಲಯದ ಧ್ವಜಾರೋಹಣವನ್ನು ಬೆಳಿಗ್ಗೆ 7.30ರೊಳಗೆ ನೆರವೇರಿಸಿ ಬೆಳಿಗ್ಗೆ 8.30ಕ್ಕೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಹಾಜರಾಗಬೇಕು. ಅಂದು ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಿಂದ ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮ ಜರುಗಲಿದ್ದು, ಎಲ್ಲ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಕಡ್ಡಾಯವಾಗಿ ಸಮಯಕ್ಕೆ ಸರಿಯಾಗಿ ಹಾಜರಿರಬೇಕು ಎಂದು ಸೂಚಿಸಿದರು.



> ಕಾರ್ಯಕ್ರಮದ ಸ್ಥಳದ ಸ್ವಚ್ಛತೆ ಕುರಿತು ಆದ್ಯತೆ ವಹಿಸಬೇಕು. ಅತಿಥಿಗಳಿಗೆ ಆಸನದ ವ್ಯವಸ್ಥೆ, ಅಲ್ಪೋಪಹಾರದ ವ್ಯವಸ್ಥೆ ಕುರಿತು ಕ್ರಮ ಕೈಗೊಳ್ಳಬೇಕು. ವಿವಿಧ ರಂಗಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನಿಸುವ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಕಾರ್ಯಕ್ರಮದಲ್ಲಿ ಶಿಷ್ಟಾಚಾರ ಉಲ್ಲಂಘನೆಯಾಗದಂತೆ ನಿಗಾವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಗಣರಾಜ್ಯೋತ್ಸವದ ವ್ಯವಸ್ಥಿತ ಆಚರಣೆಗಾಗಿ ವಿವಿಧ ಇಲಾಖೆಯ ಅಧಿಕಾರಿಗಳು ಪರಸ್ಪರ ಸಮನ್ವಯತೆಯಿಂದ ಹಾಗೂ ಶ್ರದ್ಧೆಯಿಂದ ಕಾರ್ಯನಿರ್ವಹಿಸುವುದು ಮುಖ್ಯವಾಗಿದೆ.

▶▶ 3ನೇ ಪುಟಕ್ಕೆ

## ಅಂಗಡಿ, ವಾಣಿಜ್ಯ ಸಂಸ್ಥೆಗಳ ಮಾಲೀಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ಹಾಗೂ ಗದಗ ತಾಲೂಕಿನಲ್ಲಿರುವ ಎಲ್ಲ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು ಕರ್ನಾಟಕ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಕಾಯ್ದೆ 1961 ಹಾಗೂ ನಿಯಮಗಳು -1963 ರ ಅಡಿಯಲ್ಲಿ ನೋಂದಣಿ ಮಾಡಿಸಿಕೊಳ್ಳವುದು ಕಡ್ಡಾಯವಾಗಿದೆ.

ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಮಾಲೀಕರು ಹಾಗೂ ಉದ್ದಿಮೆದಾರರು ಈಗಾಗಲೇ ತಮ್ಮ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳನ್ನು ಕಾರ್ಮಿಕ ನಿರೀಕ್ಷಕರ ಕಚೇರಿ 1ನೇ ವೃತ್ತ ಹಾಗೂ ಕಾರ್ಮಿಕ ನಿರೀಕ್ಷಕರ ಕಚೇರಿ ಗದಗ 2ನೇ ವೃತ್ತ, ಗದಗ ಇಲ್ಲಿ ನೋಂದಣಿ ಮಾಡಿಸಿಕೊಂಡ ಸಂಸ್ಥೆಗಳನ್ನು ಹೊರತುಪಡಿಸಿ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಲ್ಲಿ ಕಾರ್ಮಿಕರು ಇರುವ ಹಾಗೂ ಕಾರ್ಮಿಕರು ಇಲ್ಲದೇ ಇರುವ ಸಂಸ್ಥೆಗಳು ಸಹ ಕರ್ನಾಟಕ ಸರ್ಕಾರದ ಇ-ಕಾರ್ಮಿಕ ತಂತ್ರಾಂಶದಲ್ಲಿ https://www.ekarmika.karnataka.gov.in/ ekarmika/static/ ನಿಗದಿತ ಆನ್‌ಲೈನ್ ಮೂಲಕ ಶುಲ್ಕವನ್ನು ಮತ್ತು ಅವಶ್ಯಕ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಿ ಸಂಸ್ಥೆಗಳ ನೋಂದಣಿ ಪತ್ರ ಪಡೆದುಕೊಳ್ಳಬೇಕೆಂದು ಗದಗ ಬೆಟಗೇರಿ ಹಾಗೂ ಗದಗ ತಾಲೂಕಿನ ಎಲ್ಲ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಮಾಲೀಕರು ಹಾಗೂ ಉದ್ದಿಮೆದಾರರಿಗೆ ತಿಳುವಳಿಕೆ ನೀಡಲಾಗಿದೆ ಹಾಗೂ ತಪ್ಪಿದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಕಾರ್ಮಿಕ ಇಲಾಖೆಯ ಪ್ರಕಟಣೆ ತಿಳಿಸಿದೆ.

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ಖಾಲಿಯಿರುವ 13 ಕಿರಿಯ ಆರೋಗ್ಯ ಸಹಾಯಕ 1 ಕಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಮತ್ತು 02 ಬ್ಲಾಕ್ ಪ್ರೋಗ್ರಾಮ್ ಮ್ಯಾನೇಜರ್ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ಗದಗ ಇಲ್ಲಿ ಅರ್ಜಿ ಆಹ್ವಾನಿಸಲಾಗಿತ್ತು, ಸದರಿ ಹುದ್ದೆಗಳ ಅರ್ಜಿಗಳನ್ನು ಸ್ವೀಕರಿಸಲಾಗಿದ್ದು, 1:3 ಅನುಪಾತದಲ್ಲಿನ ಅರ್ಹ ಅಭ್ಯರ್ಥಿಗಳ ಮೂಲ ದಾಖಲಾತಿಗಳನ್ನು ಜನವರಿ 2 ರಿಂದ 6 ರವರೆಗೆ ಹಾಗೂ ಮತ್ತೊಮ್ಮ ಜನವರಿ 13 ರಿಂದ 16 ರವರೆಗೆ ಪರಿಶೀಲಿಸಲಾಗಿದ್ದು, ರೋಷ್ಟರ್ ಮೆರಿಟ್ ಆಧಾರದ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್, ಗದಗ ಹಾಗೂ ಅಧ್ಯಕ್ಷರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಗದಗ ಇವರ ಅನುಮೋದನೆ ಮೇರೆಗೆ ತಯಾರಿಸಿದಂತೆ, ಕಚೇರಿಯ ಸೂಚನಾ ಫಲಕದಲ್ಲಿ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಲಗತ್ತಿಸಲಾಗಿದೆ.

ತಾತ್ಕಾಲಿಕ ಆಯ್ಕೆ ಪಟ್ಟಿಗೆ ಯಾವುದೇ ಆಕ್ಷೇಪಣೆ ಇದ್ದಲ್ಲಿ ಜನವರಿ 27 ಸಂಜೆ 5 ಗಂಟೆಯವರಗೆ ಖುದ್ದಾಗಿ ಕಚೇರಿಗೆ ಬಂದು ಆಕ್ಷೇಪಣೆ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ ಆಯ್ಕೆ ಸಮಿತಿ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗದಗ ಜಿಲ್ಲಾ 10ನೇ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಪ್ರೊ. ಚಂದ್ರಶೇಖರ ವಸ್ತ್ರದ

# ಕನ್ನಡ ಜನಪದವು ವಾಣಿಜ್ಯೀಕರಣದತ್ತ ಸಾಗಲಿ



■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಮಾತೃ ಭಾಷೆಯಾದ ಕನ್ನಡ ಭಾಷೆ ಅವನತಿಯತ್ತ ಸಾಗುತ್ತಿದೆ. ಕಾಸರಗೋಡು ಪ್ರದೇಶವು ಕೇರಳ ಪಾಲಾಯಿತು. ಬೆಳಗಾವಿ ಬೀದರ್‌ನಲ್ಲಿ ಮರಾಠಿ ಭಾಷಿಕರ ಸಂಖ್ಯೆ ಹೆಚ್ಚುತ್ತಿದೆ. ರಾಯಚೂರು ಭಾಗವು ತೆಲುಗು ಭಾಷಿಕರ ಪಾಲಾಗುತ್ತಿದೆ ಎಂದು ಸಮ್ಮೇಳನ ಸರ್ವಾಧ್ಯಕ್ಷ ಪ್ರೊ. ಚಂದ್ರಶೇಖರ ವಸ್ತ್ರದ ಹೇಳಿದರು.

ಗಜೇಂದ್ರಗಡದಲ್ಲಿ ಸೋಮವಾರ ಜರುಗಿದ ಗದಗ ಜಿಲ್ಲಾ 10ನೇ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಸರ್ವಾಧ್ಯಕ್ಷ ಭಾಷಣ ಮಾಡಿದ ಅವರು, ಬೇಲೂರಿನ ಶಿಲಾ ಬಾಲಕೆಯರ ಒಂದು ಶಿಲೆಯನ್ನು ಕೆತ್ತಿದವರು ಗದಗ ಜಿಲ್ಲೆಯವರು ಎಂಬುದು ಹೆಮ್ಮೆಯ ವಿಚಾರ ಎಂದರಲ್ಲದೆ, ನಾಡಿನ ಶಿಲ್ಪಕಲೆಗಳ ರಚನೆಯಲ್ಲಿ ಜಿಲ್ಲೆಯ ಮಹನೀಯರು ನೀಡಿರುವ ಅಪಾರ ಪಾತ್ರದ ಕುರಿತು ವಿವರಿಸಿದರು.

ಗ್ರಾಮೀಣ ಕೈಗಾರಿಕೋದ್ಯಮದಲ್ಲಿ ಜಾನಪದ, ಶಿಲ್ಪಕಲೆ ಬಿತ್ತರಿಸುವ ಕೆಲಸ ಆಗಬೇಕಿದೆ. ವಿಶೇಷವಾಗಿ ಜಾನಪದವನ್ನು ವಾಣಿಜ್ಯೀಕರಣ ಮಾಡಬೇಕಿದೆ. ಜಾನಪದಗಳು ವಿಶ್ವವಿದ್ಯಾಲಯ, ಶಿಕ್ಷಣ ಸಂಸ್ಥೆಗಳಲ್ಲಿ ಇದ್ದರೆ ಬೆಳೆಯುವುದಿಲ್ಲ. ಜಾನಪದಗಳು ಕಲಾವಿದರಿಂದ ಮಾತ್ರ ಬೆಳೆಯಲು ಸಾಧ್ಯ. ಜಿಲ್ಲೆಯಲ್ಲಿ ಚಾಮರಸನ ಬಗ್ಗೆ ಸಂಶೋಧನೆ, ಚೆನ್ನವೀರ ಕಣವಿ, ಅಂದಾನಪ್ಪ ದೊಡ್ಡಮೇಟಿ ಅವರ ಸ್ಮಾರಕ ಸ್ಥಾಪನೆ ಆಗಬೇಕಿದೆ. ಜಿಲ್ಲೆಯಲ್ಲಿ ನೀರಾವರಿ ಯೋಜನೆಗಳನ್ನು ಅನುಷ್ಠಾನ ಮಾಡಲು ಸರ್ಕಾರ ಹೆಚ್ಚು ಉತ್ಸುಕವಾಗಬೇಕು ಎಂದರು.

**ಸರ್ವಾಧ್ಯಕ್ಷರ ಕೋರಿಕೆಗಳು**

* ಸರ್ಕಾರಿ ಶಾಲೆಗಳಿಗೆ ಶಿಕ್ಷಕರ ನೇಮಕ, ಮೂಲಭೂತ ಸೌಕರ್ಯ ಒದಗಿಸುವುದು.
* ಸಾಹಿತಿ, ಸಂಗೀತಗಾರ, ಕಲಾವಿದರ ಅಭಿವೃದ್ಧಿಗೆ ಜಿಲ್ಲೆಯಲ್ಲಿ ಅಕಾಡೆಮಿ ಸ್ಥಾಪನೆ.
* ರೈತ-ಗ್ರಾಹಕರಿಗೆ ಅನುಕೂಲ ಆಗಲು ಗದಗನಲ್ಲಿ 'ಶನಿವಾರ ಸಂತೆ' ಸ್ಥಾಪನೆ.
* ಕಪ್ಪತಗುಡ್ಡ ರಕ್ಷಣೆಗೆ ಒಕ್ಕೊರಲಿನ ನಿರ್ಣಯ.
* ಜಿಲ್ಲೆಯ ಎಲ್ಲ ಐತಿಹಾಸಿಕ ಸ್ಥಳಗಳ ಉತ್ಖನನವಾಗಲಿ.
* ಜಿಲ್ಲೆಯ ನೀರಾವರಿ ಯೋಜನೆಗಳಿಗೆ ವೇಗ ದೊರಕಲಿ.

### ಮಹಾಯೋಗಿ ವೇಮನರ 613ನೇ ಜಯಂತಿ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ ಕರೆ

# ವೇಮನರ ತತ್ವ-ಸಿದ್ಧಾಂತಗಳೊಂದಿಗೆ ಜಾಗೃತ ಸಮಾಜ ನಿರ್ಮಿಸೋಣ



■ ವಿಜಯಸಾಕ್ಷಿ ಸುದ್ದಿ, ಗದಗ

ಮಹಾಯೋಗಿ ವೇಮನ ಮತ್ತು ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಅವರುಗಳ ತತ್ವ ಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಜಾಗೃತ ಸಮಾಜ ನಿರ್ಮಾಣವಾಗಬೇಕು ಎಂದು ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ನಗರದ ಶಿವಾನಂದ ಕಲ್ಯಾಣ ಮಂಟಪದಲ್ಲಿ ರವಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಗದಗ ಜಿಲ್ಲಾ ರೆಡ್ಡಿ ಸಮಾಜ ಸಂಘ ಇವರುಗಳ ಸಹಯೋಗದಲ್ಲಿ ಜರುಗಿದ ಮಹಾಯೋಗಿ ವೇಮನರ 613ನೇ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವೇಮನರ ಜಯಂತಿಯನ್ನು ಕರ್ನಾಟಕ ತುಂಬೆಲ್ಲಾ ಆಚರಣೆ ಮಾಡಬೇಕು ಎಂದು ವಿಶೇಷ ಪ್ರೇರಣೆ ನೀಡಿದವರಲ್ಲಿ ಗದಗ ಜಿಲ್ಲೆಯವರ ಪಾತ್ರ ಅಪಾರವಿದೆ. ವೇಮನ ಸಾಹಿತ್ಯ ಹಾಗೂ ಅವರ ಇತಿಹಾಸ ದಕ್ಷಿಣ ಕರ್ನಾಟಕದ ಭಾಗದವರಿಗೆ ಪರಿಚಯವೇ ಇಲ್ಲದ ಸಂದರ್ಭದಲ್ಲಿ ಸಹಕಾರಿ ಭೀಷ್ಮ ಕೆ.ಎಚ್. ಪಾಟೀಲ ಸೇರಿದಂತೆ ಹಲವಾರು ಹಿರಿಯರು

> ಬೆಂಗಳೂರಿನ ಅರಮನೆ ಮೈದಾನದಲ್ಲಿ ರೆಡ್ಡಿ ಭಾಂದವರು ವಿಶೇಷವಾಗಿ ಗದಗ, ಕೊಪ್ಪಳ, ಬಾಗಲಕೋಟಿ ಜಿಲ್ಲೆ ಸೇರಿದಂತೆ ಅನೇಕ ಜನರು ಪಾಲ್ಗೊಂಡು ವೇಮನ ಹಾಗು ಹೇಮರೆಡ್ಡಿ ಮಲ್ಲಮ್ಮ ಅವರ ಜಯಂತಿ ಒಳಗೊಂಡಂತೆ ಇತರೆ ಬೇಡಿಕೆಗಳನ್ನು ಇಟ್ಟಾಗ ಮುಖ್ಯ ಮಂತ್ರಿ ಸಿದ್ಧರಾಮಯ್ಯ ಅವರು ಅವುಗಳನ್ನು ಕೆಲವೇ ತಿಂಗಳುಗಳಲ್ಲಿ ಅನುಷ್ಠಾನ ಮಾಡಿದ್ದಾರೆ.
>
> - ಎಚ್.ಕೆ. ಪಾಟೀಲ. ಸಚಿವರು.

> ವೇಮನರು ಕೃಷಿಕರ ಮತ್ತು ಗೇಣಿದಾರರ ಪರವಾಗಿ ಹೋರಾಟ ಮಾಡಿದ್ದಾರೆ. ಇಂದು ಸಂವಿಧಾನದಲ್ಲಿರುವ ಸಮಾನತೆಗಳಂತ ಮೌಲ್ಯಗಳನ್ನು ಅಂದೇ ಅಳವಡಿಸಿ ಸಮಾಜದಲ್ಲಿ ಒಗ್ಗಟ್ಟನ್ನು ತಂದಿದ್ದಾರೆ. ಮಹಾಯೋಗಿ ವೇಮನ ಅವರ ಜಯಂತಿಯನ್ನು ಎಲ್ಲರೂ ಸಂಘಟಿತರಾಗಿ ಆಯೋಜಿಸಲಾಗಿದೆ ಎಂದು ಸಚಿವ ಡಾ. ಎಚ್.ಕೆ. ಪಾಟೀಲ ಸಂತಸ ವ್ಯಕ್ತಪಡಿಸಿದರು.

▶▶ 3ನೇ ಪುಟಕ್ಕೆ

ಸಂಚಾರಿ ಆಧ್ಯಾತ್ಮಿಕ ಪ್ರವಚನದಲ್ಲಿ ಮಲ್ಲಿಕಾರ್ಜುನ ಶ್ರೀಗಳು

# ಸಂಸ್ಕಾರಹೀನ ಮನುಷ್ಯನ ಬದುಕು ವ್ಯರ್ಥ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಮನುಷ್ಯ ಆಹಾರವಿಲ್ಲದೆ ಇದ್ದರೂ ನಡೆಯುತ್ತದೆ. ನೀರಿಲ್ಲದೆ ಇದ್ದರೂ ನಡೆಯುತ್ತದೆ. ಆದರೆ ಸಂಸ್ಕಾರವಿಲ್ಲದ ಮನುಷ್ಯನ ಬದುಕು ನಿರರ್ಥಕ ಮತ್ತು ವ್ಯರ್ಥ ಎಂದು ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಹೇಳಿದರು.

ಪಟ್ಟಣದ ಶ್ರೀ ಅನ್ನದಾನೇಶ್ವರ ಕಾಲೋನಿಯಲ್ಲಿ ನಡೆದ ಎರಡು ದಿನಗಳ ಸಂಚಾರಿ ಆಧ್ಯಾತ್ಮಿಕ ಪ್ರವಚನದಲ್ಲಿ ಅವರು 2ನೇ ದಿನ ಸಂಸ್ಕಾರ ಮತ್ತು ಬದುಕು ಕುರಿತು ಆಶೀರ್ವಚನ ನೀಡಿದರು.

ಸಿದ್ಧಾಂತ ಶಿಖಾಮಣಿಯಲ್ಲಿ ಮನುಷ್ಯನ ಜೀವನದಲ್ಲಿ ಸಂಸ್ಕಾರ ಹೇಗೆ ಪಡೆಯಬೇಕು ಎಂಬುದರ ವಿವರಣೆಯಿದೆ. ಸಿದ್ಧಾಂತ ಶಿಖಾಮಣಿಯನ್ನು ಓದಿ ಅರ್ಥ ಮಾಡಿಕೊಂಡರೆ ಜೀವನದಲ್ಲಿ ಸಂಸ್ಕಾರವನ್ನು ಪಡೆದು ಸಾರ್ಥಕ ಬದುಕನ್ನು ಸಾಗಿಸಬಹುದು. ಜೀವನದಲ್ಲಿ ಎರಡು ಪ್ರಕಾರದ ಜ್ಞಾನಗಳಿವೆ. ಒಂದು ಲೌಕಿಕ ಜ್ಞಾನ, ಇನ್ನೊಂದು ಅಲೌಕಿಕ ಜ್ಞಾನ. ಲೌಕಿಕ ಜ್ಞಾನ ನಮಗೆ ನಿತ್ಯದ ಬದುಕನ್ನು ಸಾಗಿಸಲು ಸಹಾಯ ಮಾಡಿದರೆ, ಅಲೌಕಿಕ ಜ್ಞಾನ ನಮ್ಮ ಜೀವನದಲ್ಲಿ ಮೋಕ್ಷವನ್ನು ಪಡೆಯಲು ಸಹಾಯ ಮಾಡುತ್ತದೆ.

ನಾವು ಕೇವಲ ಲೌಕಿಕ ಜ್ಞಾನಕ್ಕಷ್ಟೇ ಮಹತ್ವ ನೀಡದೆ ಅಲೌಕಿಕ ಜ್ಞಾನಕ್ಕೂ ಮಹತ್ವ ನೀಡಿ, ದಿನದಲ್ಲಿ ಸ್ವಲ್ಪ ಸಮಯವಾದರೂ ಮನಸ್ಸನ್ನು ಆದ್ಯಾತ್ಮಿಕದೆಡೆಗೆ ತಿರುಗಿಸಬೇಕು. ಭಾರತೀಯ ಸಂಸ್ಕೃತಿಯಲ್ಲಿ ಉಡುಗೆ-ತೊಡುಗೆಗೆ ಬಹಳಷ್ಟು ಮಹತ್ವವಿದೆ. ಹಿಂದೂಗಳೆನಿಸಿಕೊಂಡವರು ನಮ್ಮ ಉಡುಗೆ ತೊಡುಗೆಯ ಕಡೆಗೆ ಗಮನ ನೀಡಬೇಕು. ಇದು ನಮ್ಮ ವ್ಯಕ್ತಿತ್ವವನ್ನು ಎತ್ತರಿಸಲೂ ಸಹ ಸಹಾಯ ಮಾಡುತ್ತದೆ ಎಂದರು.

ಶ್ರೀ ಅನ್ನಪೂರ್ಣೇಶ್ವರಿ ಅಕ್ಕನ ಬಳಗದವರು ಮತ್ತು ಗೀತಾ ಭೋಪಳಾಪೂರ ಪ್ರಾರ್ಥನೆ ನಡೆಸಿದರು. ಕಾರ್ಯಕ್ರಮದಲ್ಲಿ ಮುತ್ತಣ್ಣ ಪಲ್ಲೇದ, ಬಸವರಾಜ ಜಾಲೀಹಾಳ, ಎಂ.ಎ. ಹಿರೇವಡೆಯರ, ಡಾ. ಆರ್.ಕೆ. ಗಚ್ಚಿನಮಠ, ಎಸ್.ಕೆ. ಪಾಟೀಲ, ಅಂದಾನಯ್ಯ ಹಿರೇಮಠ, ಬಿ.ವಿ. ನೀರಲೋಟಿ, ಎಸ್.ವಿ. ಸಂಕನೂರ, ಟಿ.ಪಿ. ತಿಪ್ಪಶೆಟ್ಟಿ, ಡಾ. ಎಲ್.ಎಸ್. ಗೌರಿ, ಮಾಲಗೌಡರ, ಎಂ.ಸಿ. ಹಿರೇಮಠ, ಎನ್.ಎಚ್. ಮಾಸರೆಡ್ಡಿ, ಹುಣಸಿಮರದ, ವಿದ್ಯಾಸಾಗರ, ಬಿ.ಟಿ. ತಾಳಿ, ಸಂಗಯ್ಯ ಪ್ರಭುಸ್ವಾಮಿಮಠ, ರಾಜಣ್ಣ ಭೋಪಳಾಪೂರ, ವೀರೇಶ ಅಂಗಡಿ, ವಿ.ವಿ. ಅಣ್ಣಿಗೇರಿ ಮುಂತಾದವರಿದ್ದರು. ಅರುಣ ಕುಲಕರ್ಣಿ ಸ್ವಾಗತಿಸಿದರು.

# ಗಾಂಧಿ ಭಾರತ ಸಮಾವೇಶ ಹಿನ್ನಲೆ: ಬೆಳಗಾವಿಯಲ್ಲಿ ಪ್ರಾಥಮಿಕ, ಪ್ರೌಢಶಾಲೆಗಳಿಗೆ ರಜೆ ಘೋಷಣೆ!

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ,

ಗಾಂಧಿ ಭಾರತ ಸಮಾವೇಶ ಹಿನ್ನಲೆಯಲ್ಲಿ ಇಂದು ಬೆಳಗಾವಿಯಲ್ಲಿ ಪ್ರಾಥಮಿಕ, ಪ್ರೌಢಶಾಲೆಗಳಿಗೆ ರಜೆ ಘೋಷಣೆ ಮಾಡಿ ಜಿಲ್ಲಾಡಳಿತ ಆದೇಶ ಹೊರಡಿಸಿದೆ.

ಮಕ್ಕಳ ಸುರಕ್ಷಾ ದೃಷ್ಟಿಯಿಂದ ಮಂಗಳವಾರ ಬೆಳಗಾವಿ ತಾಲೂಕಿನ ನಗರ ಹಾಗೂ ಗ್ರಾಮೀಣ ಭಾಗದ ಎಲ್ಲ ಅಂಗನವಾಡಿ, ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ಒಂದು ದಿನದ ರಜೆ ಘೋಷಣೆ ಮಾಡಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಆದೇಶ ಹೊರಡಿಸಿದ್ದಾರೆ.

ಬೆಳಗಾವಿ ಸುವರ್ಣ ಸೌಧದ ಬಳಿ ಗಾಂಧಿ ಪುತ್ಥಳಿ ಅನಾವರಣ ಕಾರ್ಯಕ್ರಮಕ್ಕೆ ದೇಶದ ವಿವಿಧ ಗಣ್ಯರು, ಸ್ವಾತಂತ್ರ್ಯ ಹೋರಾಟಗಾರರು, ಸಾರ್ವಜನಿಕರು, ಮಹಿಳೆಯರು ಹಾಗೂ ವೃದ್ಧರು ಸೇರಿ ಲಕ್ಷಾಂತರ ಜನರು ಭಾಗವಹಿಸಲಿದ್ದಾರೆ.

ಅಲ್ಲದೇ ವಾಹನ ಸಂಚಾರ ದಟ್ಟಣೆ ಹೆಚ್ಚಾಗುವ ಸಂಭವವಿದ್ದು, ಶಾಲಾಮಕ್ಕಳ ಸುರಕ್ಷತಾ ಹಿತದೃಷ್ಟಿಯಿಂದ ಮುಂಜಾಗೃತಾ ಕ್ರಮವಾಗಿ ಬೆಳಗಾವಿ ತಾಲೂಕು ಶೈಕ್ಷಣಿಕ ವಲಯದ ಶಾಲೆಗಳಿಗೆ ರಜೆ ಘೋಷಣೆ ಮಾಡುವಂತೆ ಶಿಕ್ಷಣ ಇಲಾಖೆಯಿಂದ ಪ್ರಸ್ತಾವನೆ ಸಲ್ಲಿಕೆ ಮಾಡಿತ್ತು. ಈ ಪ್ರಸ್ತಾವನೆಯನ್ನು ಪರಿಶೀಲನೆ ಮಾಡಿದ ಬೆಳಗಾವಿ ಜಿಲ್ಲೆಯ ಜಿಲ್ಲಾಧಿಕಾರಿ ಮೊಹಮ್ಮದ ರೋಷನ್ ಅವರು ರಜೆ ನೀಡಿ ಪ್ರಕಟಣೆ ಹೊರಡಿಸಿದ್ದಾರೆ.

# ವೇಮನರು ಸಮಾಜದ ಏಳಿಗೆಗಾಗಿ ಸಮರ್ಪಿಸಿಕೊಂಡವರು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಹಾಕವಿ, ಯೋಗಿ ವೇಮನರು ತಮ್ಮ ತ್ರಿಪದಿ ಸಾಹಿತ್ಯದ ಮೂಲಕ ಲೋಕಸತ್ಯ, ದೈವಸತ್ಯ ಹಾಗೂ ಜೀವನ ಮೌಲ್ಯಗಳನ್ನು ಆಡು ಭಾಷೆಗಳ ಮೂಲಕ ಜನರಿಗೆ ತಿಳಿಸಿ ಸಮಾಜದ ಏಳಿಗೆಗಾಗಿ ಸಮರ್ಪಿಸಿಕೊಂಡಿದ್ದರು ಎಂದು ಉಪ ತಹಸೀಲ್ದಾರ ಮಂಜುನಾಥ ಅಮಾಸಿ ಹೇಳಿದರು.

ಅವರು ಭಾನುವಾರ ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ಯೋಗಿ ವೇಮನರ ಜಯಂತಿ ಅಂಗವಾಗಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ಮಹಾಭೋಗಿಯಾಗಿದ್ದ ವೇಮನರು ಮಹಾಯೋಗಿಗಳಾಗಿ, ನಾಡಿನಾದ್ಯಂತ ಸಂಚರಿಸಿ ಕಾಯಕನಿಷ್ಠೆ, ಸತ್ಯ, ಧರ್ಮ, ಸಂಸ್ಕೃತಿ, ಭಕ್ತಿ ಮಾರ್ಗ ತೋರಿದ್ದು ಅವರ ತತ್ವ ಚಿಂತನೆಗಳು ದಾರಿದೀಪವಾಗಿವೆ. ತಮ್ಮ ಪಾಂಡಿತ್ಯದಿಂದ 3 ಸಾವಿರಕ್ಕೂ ಹೆಚ್ಚು ಸಾಹಿತ್ಯ ಕೃತಿ ರಚಿಸಿ ಆ ಮೂಲಕ ಸಮಾಜ ಸುಧಾರಣೆಗಾಗಿ ಶ್ರಮಿಸಿದ್ದಾರೆ. ಇಂತಹ ಮಹಾನ್ ಸಂತರನ್ನು ಯಾವುದೇ ಒಂದು ಜಾತಿ, ಜನಾಂಗಕ್ಕೆ ಸೀಮಿತಗೊಳಿಸಬಾರದು ಎಂದರು.

ತಾ.ಪಂ ಇಓ ಕೃಷ್ಣಪ್ಪ ಧರ್ಮರ ಮಾತನಾಡಿ, ಬುದ್ಧನ ಕರುಣೆ, ಅಂಬೇಡ್ಕರರ ಸಮಾನತೆ, ಕಬೀರರ ಸೌಹಾರ್ದತೆ, ಬಸವಣ್ಣ-ಕುವೆಂಪು ಅವರ ವಿಶ್ವಮಾನವ ಸಂದೇಶದ ಉತ್ಕೃಷ್ಟ ಸಾಹಿತ್ಯ ವೇಮನರಿಂದ ಸೃಷ್ಟಿಯಾಯಿತು. ವೇಮನರ ಸಾಹಿತ್ಯವು ಜನರ ಮನಸ್ಸಿಗೆ ಪರಿಪೋಷಣೆ, ಸಾಂತ್ವನ, ಪ್ರಸನ್ನತೆಯನ್ನು ತಂದುಕೊಡುತ್ತದೆ ಎಂದು ಹೇಳಿದರು.

ಈ ವೇಳೆ ಹಿರಿಯರಾದ ಶಂಕ್ರಪ್ಪ ಗೊರವರ, ವೆಂಕಣ್ಣ ಚೌರಡ್ಡಿ, ಈಶಪ್ಪ ಭೂತರೆಡ್ಡಿ, ವೆಂಕಟೇಶ ಪಾಟೀಲ, ನಾಗಪ್ಪ ದಾನಿ, ವಿರೂಪಾಕ್ಷಪ್ಪ ಅಮರಶೆಟ್ಟಿ, ಮಂಜುನಾಥ ಗೊರವರ, ಬಾಬಣ್ಣ ಅಳವಂಡಿ, ಮಹೇಶ ಹಾದಿಮನಿ, ಹನಮಂತಪ್ಪ ದಾನಿ, ಸಿಬ್ಬಂದಿ ಪ್ರಶಾಂತ ಸನದಿ, ಆರ್.ಪಿ. ಶಿರಹಟ್ಟಿ, ಫಾತೀಮಾ ಪತ್ತೇಖಾನ, ಅನಿಶಾ ಪಟೇಲ, ಸೌಮ್ಯಾ ಕಾಗಿ ಮುಂತಾದವರಿದ್ದರು.

ಜ.21, ಪ.ಪೂ. ಡಾ.ಶಿವಕುಮಾರ ಮಹಾಸ್ವಾಮಿಗಳ 6ನೇ ಪುಣ್ಯ ಸ್ಮರಣೋತ್ಸವದ ನಿಮಿತ್ತ ವಿಶೇಷ ಲೇಖನ

# ತ್ರಿವಿಧ ದಾಸೋಹದ ಸಾಕಾರ ಮೂರ್ತಿ

ಸಾವಿರಾರು ವರ್ಷಗಳ ಸಾಂಸ್ಕೃತಿಕ ಹಾಗೂ ಪಾರಂಪರಿಕ ಇತಿಹಾಸವಿರುವ ನಮ್ಮ ಈ ಪಾವನ ನೆಲದಲ್ಲಿ ಅನೇಕ ಶರಣರು, ಸಂತ-ಮಹಾಂತರು ಜನ್ಮತಳೆದು ಈ ನೆಲವನ್ನು ಪಾವನವನ್ನಾಗಿಸಿದ್ದಾರೆ. ತಮ್ಮ ದಿವ್ಯಜ್ಞಾನದ ಮೂಲಕ ಶರಣರು ಆಯಾ ಕಾಲದಲ್ಲಿನ ಜನರ, ಸಮಾಜದ ಕೊಳೆಯನ್ನು ತೊಳೆದ ನಿತ್ಯ ಸ್ಮರಣೀಯರು. ಮೂಢನಂಬಿಕೆಗಳನ್ನು ತಮ್ಮ ವಿಚಾರಗಳಿಂದ ಜನ ಸಾಮಾನ್ಯರಿಂದ ದೂರಮಾಡಿ ಸ್ವಸ್ಥ ಸಮಾಜ ಕಟ್ಟಿ ಬೆಳೆಸಿದವರು.ಶರಣ ತತ್ವಗಳ ಮೂಲಕ ಜನರ ಬದುಕನ್ನು ತಿದ್ದಿ ತೀಡಿದವರು. ಇಂಥಹ ಶ್ರೇಷ್ಠ ಶರಣರಲ್ಲಿ ಪ್ರಾತಃಸ್ಮರಣೀಯರಾಗಿರುವವರೇ ಪರಮಪೂಜ್ಯ ಡಾ. ಶಿವಕುಮಾರ ಮಹಾಸ್ವಾಮಿಗಳು.

ನಡೆಯೊಳಗೆ ನುಡಿ ತುಂಬಿ
ನುಡಿಯೊಳಗೆಯೇ ನಡೆ ತುಂಬಿ
ನಡೆ-ನುಡಿ ಎರಡನೂ ಪರಿಪೂರ್ಣ ತುಂಬಿ
ಲಿಂಗವ ಕೂಡಬಲ್ಲಾತನೇ ನಿಜಶರಣ
ನೋಡಾ ಅಖಂಡೇಶ್ವರ

ಎಂಬ ವಚನದಂತೆ ನಡೆ ಹಾಗೂ ನುಡಿಯಲ್ಲಿ ಪರಿಪೂರ್ಣತೆಯನ್ನು ತುಂಬಿ ಗುರುಭಕ್ತಿಯಲ್ಲಿ ಮುಕ್ತಿಯನ್ನು ಕಂಡು ಶರಣ ಎಂಬ ಪದಕ್ಕೆ ಮಹತ್ತರವಾದ ಅರ್ಥವನ್ನು ತಂದು ಪುಣ್ಯದಂತೆ ಬಂದು ಜ್ಞಾನಜ್ಯೋತಿಯಂತೆ ಹರಿದಾಡಿದ ಮಹನೀಯರು ಪರಮಪೂಜ್ಯ ಸಿದ್ದಗಂಗಾ ಶಿವಕುಮಾರ ಮಹಾಸ್ವಾಮಿಗಳು. ಶರಣ ತತ್ವ ಹಾಗೂ ಕಾಯಕ ತತ್ವದ ಮಹಾಚೇತನರಾದ ಇವರು ಭವದ ಬೆಳಕಿನಲ್ಲಿ ಜ್ಞಾನದ ಬುತ್ತಿಯನ್ನು ಹಂಚಿದವರು. ಅರಿವಿನ ಜ್ಯೋತಿಯಾಗಿ ಜಗಕೆಲ್ಲ ಬೆಳಕಾದವರು.

ಈ ನಾಡಿನಲ್ಲಿ ಜ್ಞಾನಜ್ಯೋತಿಯಂತೆ ಹರಿದಾಡಿ ಸಿದ್ಧಗಂಗೆಯಲ್ಲಿ ಅನ್ನ-ಅಕ್ಷರ ಎಂಬ ಶುದ್ಧಗಂಗೆಯನು ಹರಿಸಿದ



ಭಗೀರಥರಾದವರು ಪರಮಪೂಜ್ಯ ಸಿದ್ಧಗಂಗೆಯ ಡಾ.ಶಿವಕುಮಾರ ಮಹಾಸ್ವಾಮಿಗಳು. ನಡೆದಾಡುವ ದೇವರಾಗಿ ಅನ್ನ, ಅಕ್ಷರ, ಕಾಯಕಗಳ ಮೂಲಕ ತ್ರಿವಿಧ ದಾಸೋಹಿಗಳಾಗಿ ಶರಣ ತತ್ವದ ಪಥದಲ್ಲಿ ತಮ್ಮ ಜೀವನವನ್ನು ನಡೆಸಿದವರು. ನಾಡಿನ ಅಸಂಖ್ಯಾತ ಮಠಾಧೀಶರಿಗೆ, ಪರಮಪೂಜ್ಯರಿಗೆ ಆಧ್ಯಾತ್ಮಿಕ, ಧಾರ್ಮಿಕ, ಗುರುಗಳಾಗಿ, ಮಾರ್ಗದರ್ಶಕರಾಗಿ, ಜನಸಾಮಾನ್ಯರಿಗೆ ದೈವಾಂಶಸಂಭೂತರಾಗಿ ಬಾಳಿದ ಮಹನೀಯರು. 12ನೇ ಶತಮಾನದಲ್ಲಿ ಬಸವಣ್ಣನವರು ಹೇಳಿದ ತತ್ವಗಳನ್ನು ಚಾಚೂ ತಪ್ಪದೆ ಸಾಕಾರಗೊಳಿಸಿದ ದಿವ್ಯ ಚೈತನ್ಯರು.

ಪ.ಪೂ ಶಿವಕುಮಾರ ಶ್ರೀಗಳು ಮಾಗಡಿ ತಾಲೂಕಿನ ವೀರಾಪುರದಲ್ಲಿ ಶರಣ ಹೊನ್ನೇಗೌಡ ಮತ್ತು ಮಹಾಸಾಧ್ವಿ ಶರಣೆ ಗಂಗಮ್ಮನವರ ಪವಿತ್ರ ಗರ್ಭದಲ್ಲಿ 1908 ಏಪ್ರಿಲ್ 1ರಂದು ಜನಿಸಿದರು. ಇವರ ಬಾಲ್ಯದ ಹೆಸರು ಶಿವಣ್ಣ. ತಂದೆ-ತಾಯಿಯರ 13ನೇ ಮಗನಾದ ಇವರು ತಮ್ಮ ಪ್ರಾಥಮಿಕ ಶಿಕ್ಷಣವನ್ನು ನೆರೆಯ ಪಾಲನಹಳ್ಳಿಯಲ್ಲಿ ಹಾಗೂ ಮಾಧ್ಯಮಿಕ ಶಿಕ್ಷಣವನ್ನು ತುಮಕೂರಿನ ಸರ್ಕಾರಿ ಪ್ರೌಢಶಾಲೆಯಲ್ಲಿ ಪೂರೈಸಿದರು. 1926ರಲ್ಲಿ ಆಗಿನ ಮೆಟ್ರಿಕ್ಯುಲೇಷನ್ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದರು. ಬಾಲ್ಯದಲ್ಲಿಯೇ ತಾಯಿಯನ್ನು ಕಳೆದುಕೊಂಡ ಶಿವಣ್ಣ ನಂತರದ ದಿನಗಳಲ್ಲಿ ಅಕ್ಕನ ಆಶ್ರಯದಲ್ಲಿ ಬೆಳೆದರು. ಉನ್ನತ ಶಿಕ್ಷಣಕ್ಕಾಗಿ ಬೆಂಗಳೂರಿನ ಕಾಲೇಜಿಗೆ ಸೇರಿದ ಇವರು ಶ್ರೀ ಗುಬ್ಬಿ ತೋಟದಪ್ಪ ಧರ್ಮಛತ್ರದಲ್ಲಿ ಉಳಿದುಕೊಂಡು ವಿದ್ಯಾಭ್ಯಾಸ ಮಾಡಿದರು. ಆ ವೇಳೆಗಾಗಲೇ ಆಗಿನ ಸಿದ್ದಗಂಗಾ ಮಠಾಧಿಪತಿಗಳಾದ ಶ್ರೀ ಉದ್ದಾನ ಶಿವಯೋಗಿಗಳ ಸಂಪರ್ಕಕ್ಕೆ ಬಂದಿದ್ದರು. ಜೊತೆಗೆ ಮಠದ ಕಿರಿಯ ಶ್ರೀಗಳಾದ ಮರುಳಾರಾಧ್ಯರ ಸಾಂಗತ್ಯ ಇವರಿಗೆ ಗುರುಕುಲದ ಅನುಭವ ನೀಡಿತ್ತು. ಶಿವಣ್ಣನವರು ಸಂಸ್ಕೃತ ಹಾಗೂ ಇಂಗ್ಲಿಷ್ ಭಾಷೆಯಲ್ಲಿ ಪ್ರಕಾಂಡ ಪಂಡಿತರಾಗಿದ್ದರು.

ಸಿದ್ದಗಂಗಾ ಮಠದ ನಿರಂತರ ಸಂಪರ್ಕದಲ್ಲಿದ್ದ ಶಿವಣ್ಣನವರ ಜೀವನದಲ್ಲಿ ಆಕಸ್ಮಿಕ ಘಟನೆ ಎಂಬಂತೆ 1930ರಲ್ಲಿ ಶ್ರೀಮಠದ ಕಿರಿಯ ಶ್ರೀಗಳಾದ ಮರುಳಾರಾಧ್ಯರು ಅಕಾಲಿಕವಾಗಿ ಲಿಂಗೈಕ್ಯರಾದರು. ಈ ಸುದ್ದಿಯನ್ನು ತಿಳಿದು ಅವರ ದರ್ಶನ ಹಾಗೂ ಕ್ರಿಯಾ ಸಮಾಧಿ ಕಾರ್ಯಕ್ಕಾಗಿ ಶ್ರೀಮಠಕ್ಕೆ ಬಂದಿದ್ದ ಶಿವಣ್ಣನವರನ್ನು ಹಿರಿಯ ಶ್ರೀಗಳಾದ ಉದ್ದಾನ ಶ್ರೀಗಳು ಎಲ್ಲರ ಸಮ್ಮುಖದಲ್ಲಿ ಮಠದ ಉತ್ತರಾಧಿಕಾರಿ ಎಂದು ಪ್ರಕಟಿಸಿದರು. ದಿವ್ಯ ಜ್ಞಾನಿಗಳಾಗಿದ್ದ ಹಿರಿಯ ಉದ್ದಾನ ಶ್ರೀಗಳಿಗೆ ಶಿವಣ್ಣನವರ ಉಜ್ವಲ ಭವಿಷ್ಯ ಮೊದಲೇ ಕಂಡಿತ್ತೆಂಬಂತೆ ಎಲ್ಲವೂ ಕ್ಷಣಮಾತ್ರದಲ್ಲಿ ನಡೆದುಹೋಯಿತು. ಸಕಲವೂ ಶಿವನಿಚ್ಛೆ ಎಂದ ಶಿವಣ್ಣನವರು ಕಾವಿ, ರುದ್ರಾಕ್ಷಿ ಧರಿಸಿ ಸನ್ಯಾಸಿಗಳಾಗಿ ಶಿವಕುಮಾರ ಸ್ವಾಮಿಗಳಾದರು. ಹಿರಿಯ ಶ್ರೀಗಳಾದ ಉದ್ದಾನ ಶಿವಯೋಗಿಗಳು ಲಿಂಗೈಕ್ಯರಾದ ನಂತರ ಶ್ರೀಮಠದ ಸಕಲ ಆಡಳಿತ ಜವಾಬ್ದಾರಿ 1941ರಲ್ಲಿ ಶ್ರೀಗಳಿಗೆ ಹಸ್ತಾಂತರವಾಯಿತು.

ಹಲವು ಸವಾಲುಗಳನ್ನು ಧೈರ್ಯದಿಂದ ಎದುರಿಸಿದ ಪೂಜ್ಯರು ಭಕ್ತರ ಸಹಕಾರ ಹಾಗೂ ತಮ್ಮ ಕಾಯಕ ಜೀವನದಿಂದ ಶ್ರೀಮಠದ ಧಾರ್ಮಿಕ ಕಾರ್ಯಗಳು, ಮಕ್ಕಳ ಶಿಕ್ಷಣ ಹಾಗೂ ದಾಸೋಹಕ್ಕೆ ಯಾವುದೇ ಕೊರತೆಯಾಗದಂತೆ ಯಶಸ್ವಿಯಾಗಿ ನಿಭಾಯಿಸಿದರು. ತಮ್ಮ ಗುರುಗಳ ಇಚ್ಛೆಯಂತೆ ಶಿಕ್ಷಣ ಸಂಸ್ಥೆಗಳನ್ನು, ವಿದ್ಯಾರ್ಥಿನಿಲಯಗಳನ್ನು, ಪ್ರಸಾದ ನಿಲಯಗಳನ್ನು ಸಮರ್ಥವಾಗಿ ಮುನ್ನಡೆಸಿದರು.

ಸುಮಾರು ಎಂಭತ್ತು ವರ್ಷಗಳಿಗೂ ಹೆಚ್ಚಿನ ಕಾಲ ನಿರಂತರವಾಗಿ ನಾಡಿನ ಮೂಲೆಮೂಲೆಯಲ್ಲಿರುವ ಬಡ ಹಾಗೂ ಅವಕಾಶ ವಂಚಿತ ಮಕ್ಕಳಿಗೆ ಜಾತಿ-ಮತ ಅಂತಸ್ತುಗಳ ಹಂಗಿಲ್ಲದೆ ಜ್ಞಾನ ದಾಸೋಹದ ಜೊತೆಜೊತೆಗೆ ಅಕ್ಷರವನ್ನು ಕಲಿಸಿ ಅವರ ಬಾಳು ಸನ್ಮಾರ್ಗದಲ್ಲಿ ಸಾಗಲುತಳಪಾಯ ಹಾಕಿಕೊಟ್ಟರು. ತುಮಕೂರು ನಗರದಿಂದ ಸುಮಾರು 6 ಕಿ.ಮೀ ದೂರದಲ್ಲಿರುವ ಶ್ರೀ ಸಿದ್ಧಗಂಗಾ ಕ್ಷೇತ್ರದಲ್ಲಿ ಸುಮಾರು 10 ಸಾವಿರಕ್ಕಿಂತ ಹೆಚ್ಚು ಮಕ್ಕಳು ಏಕಕಾಲದಲ್ಲಿ ವಿದ್ಯಾಭ್ಯಾಸ ಮಾಡುವ ಅವಕಾಶ ಶ್ರೀಮಠದಲ್ಲಿ ಮಾಡಿದರು.

ಶಿವಯೋಗ ಸಿದ್ಧಿಯಿಂದ ಸಾರ್ಥಕ ಶತಾಯುಷಿ ಬದುಕನ್ನು ಸವೆಸಿದ ಪೂಜ್ಯಶ್ರೀಗಳು ವಯೋ ಸಂಬಂಧಿ ಆರೋಗ್ಯ ಸಮಸ್ಯೆಗಳಿಗೆ ಬಳಲಿದರು. ಭಕ್ತರ ಪ್ರೀತಿಯ ಒತ್ತಾಯಕ್ಕೆ ಮಣಿದು ಶಸ್ತ್ರಚಿಕಿತ್ಸೆಗೆ ಒಳಗಾದರು. ಆದರೆ ಶ್ವಾಸಕೋಶದ ಸೋಂಕಿನಿಂದ ಶ್ರೀಗಳು ಮತ್ತೆ ಚೇತರಿಸಿಕೊಳ್ಳಲೇ ಇಲ್ಲ. ಪೂಜ್ಯರ ಆರೋಗ್ಯ ಸುಧಾರಣೆಗಾಗಿ ಮಾಡಿದ ಭಕ್ತರ ಪ್ರಾರ್ಥನೆ ಈಡೇರಲಿಲ್ಲ. 111 ವರ್ಷಗಳ ಕಾಲ ಅವಿರತ ಶ್ರಮಿಸಿದ ಈ ಕಾಯಕ ಯೋಗಿಯನ್ನು ಆ ಭಗವಂತ ಚಿರವಿಶ್ರಾಂತಿಗಾಗಿ 2019 ಜನವರಿ 21ರಂದು ತನ್ನೆಡೆಗೆ ಕರೆದುಕೊಂಡ.

ಶ್ರೀಗಳನ್ನರಸಿಬಂದ ಪುರಸ್ಕಾರ, ಗೌರವಕ್ಕೆ ಲೆಕ್ಕವಿಲ್ಲ. ನಾಡಿನ ಪ್ರತಿಯೊಬ್ಬ ಜನಸಾಮಾನ್ಯರಮನದಲ್ಲಿ ನಡೆದಾಡುವ ದೇವರು, ಕಾಯಕಯೋಗಿ, ತ್ರಿವಿಧ ದಾಸೋಹಿ, ಅಭಿನವ ಬಸವಣ್ಣ, ಕಲಿಯುಗದ ದೈವ ಎಂಬ ಬಿರುದುಗಳಿಗೆ ಭಾಜನರಾಗಿದ್ದಾರೆ. ಇಂತಿಪ್ಪ ಶ್ರೀಗಳು ಹಾಕಿಕೊಟ್ಟ ಮಾರ್ಗದಲ್ಲಿ ಈಗಿನ ಮಠಾಧಿಪತಿಗಳಾದ ಶ್ರೀ ಸಿದ್ಧಲಿಂಗಸ್ವಾಮಿಗಳು ಹಿರಿಯ ಶ್ರೀಗಳಂತೆ ಸಾಮಾಜಿಕ, ಆಧ್ಯಾತ್ಮಿಕ ಹಾಗೂ ಶೈಕ್ಷಣಿಕ ಕಾರ್ಯಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದಾರೆ. ಶರಣ ಎಂಬ ಪದಕ್ಕೆ ಹಾಗೂ ಕಾವಿ ಬಟ್ಟೆಗೆ ನಿಜವಾದ ಅರ್ಥ ನೀಡಿದ ನಿಸ್ವಾರ್ಥ ಸಂತಶ್ರೇಷ್ಠರು ಶ್ರೀ ಶಿವಕುಮಾರ ಮಹಾಸ್ವಾಮಿಗಳು. ಇವರ ಪುಣ್ಯಸ್ಮರಣೆಯ ದಿನವಾದ ಜನವರಿ 21 ನ್ನು ಪ್ರತೀ ವರ್ಷ ದಾಸೋಹ ದಿನವನ್ನಾಗಿ ಆಚರಿಸಬೇಕೆಂಬ ಸರ್ಕಾರದ ನಿರ್ಧಾರವು ಸೂಕ್ತವೂ, ಅರ್ಥಪೂರ್ಣವೂ ಆಗಿದೆ. ಇಂಥಹ ಮಹನೀಯರನ್ನು ಈ ಸಂದರ್ಭದಲ್ಲಿ ನೆನೆದು ನಾವು-ನೀವೆಲ್ಲರೂ ಪುನೀತರಾಗೋಣ ಬನ್ನಿ.



– ಶಾಂತಗೌಡ ಮರಿಗೌಡರ
ಶಿಕ್ಷಕರು, ಕುರ್ತಕೋಟಿ.

ಬೆಳ್ಳಟ್ಟಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಖಾಯಂ ವೈದ್ಯಾಧಿಕಾರಿ ನೇಮಕ ಯಾವಾಗ?

# ತುರ್ತು ಸಂದರ್ಭದಲ್ಲಿ ಚಿಕಿತ್ಸೆಯದೇ ಸಮಸ್ಯೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಬೆಳ್ಳಟ್ಟಿ ಗ್ರಾಮದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸದ್ಯ ಟ್ರೈನಿ ವೈದ್ಯರು ಹೊರ ರೋಗಿಗಳನ್ನು ತಪಾಸಣೆ ಮಾಡುತ್ತಿದ್ದು, ತುರ್ತು ಸಂದರ್ಭದಲ್ಲಿ ಇಲ್ಲಿ ಸಕಾಲಕ್ಕೆ ಚಿಕಿತ್ಸೆ ಲಭಿಸದೇ ಇರುವದರಿಂದ ತೊಂದರೆ ಅನುಭವಿಸುತ್ತಿರುವ ಸಾರ್ವಜನಿಕರು ಖಾಯಂ ವೈದ್ಯಾಧಿಕಾರಿಯ ನೇಮಕಕ್ಕಾಗಿ ಕಾಯುತ್ತಿದ್ದಾರೆ.

ತಾಲೂಕಿನಲ್ಲಿ ಬೆಳ್ಳಟ್ಟಿ ಗ್ರಾಮವು ಇತ್ತೀಚಿನ ದಿನಗಳಲ್ಲಿ ವೇಗವಾಗಿ ಬೆಳೆಯುತ್ತಿದ್ದು, ಸುಮಾರು 30-40 ಹಳ್ಳಿಗಳ ಸಾರ್ವಜನಿಕರ ಆರೋಗ್ಯ ತಪಾಸಣೆ ಮಾಡಬೇಕಾಗಿದ್ದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಹಲವು ತಿಂಗಳುಗಳಿಂದ ಖಾಯಂ ವೈದ್ಯಾಧಿಕಾರಿ ಇಲ್ಲದೇ ಇರುವುದರಿಂದ ಈ ಭಾಗದ ಜನತೆ ತೊಂದರೆ ಅನುಭವಿಸುತ್ತಿದ್ದಾರೆ. ವೈದ್ಯಾಧಿಕಾರಿ ಕೊರತೆ ಇರುವುದರಿಂದ ಜಿಮ್ಸ್‌ನ ಟ್ರೈನಿ ವೈದ್ಯರೊಬ್ಬರನ್ನು ಇಲ್ಲಿಗೆ ನಿಯೋಜಿಸಿದ್ದು, ಇವರು ಬೆಳಿಗ್ಗೆ 10 ಗಂಟೆಯಿಂದ 2ರವರೆಗೆ ಹೊರ ರೋಗಿಗಳ ತಪಾಸಣೆ ನಡೆಸುತ್ತಾರೆ. ಇದಾದ ಮೇಲೆ ತುರ್ತು ಸಂದರ್ಭದಲ್ಲಿ ಇಲ್ಲಿ ಚಿಕಿತ್ಸೆ ಸಿಗದೇ ಬೇರೆ ಕಡೆಗಳಲ್ಲಿ ತೆರಳಬೇಕಾಗಿದೆ.




ಬೆಳ್ಳಟ್ಟಿ ಗ್ರಾಮ ಪಂಚಾಯಿತಿಯ ಕೇಂದ್ರಸ್ಥಾನವಾಗಿದ್ದು, ಸಹಜವಾಗಿ ಇಲ್ಲಿಯ ಅಧ್ಯಕ್ಷರು ಆರೋಗ್ಯ ಸಮಿತಿಯ ಅಧ್ಯಕ್ಷರಾಗಿರುತ್ತಾರೆ. ಅವರು ಅಧ್ಯಕ್ಷರಾಗಿ 16 ತಿಂಗಳು ಗತಿಸಿದರೂ ಸಹ ಅವರ ನೇತೃತ್ವದಲ್ಲಿ ಒಂದು ಸಭೆಯನ್ನೂ ನಡೆಸಿಲ್ಲ. ಬಂದ ಅನುದಾನದ ಬಗ್ಗೆ ಮಾಹಿತಿಯನ್ನೂ ನೀಡಿಲ್ಲ. ಖಾಯಂ ವೈದ್ಯಾಧಿಕಾರಿ ಇಲ್ಲ, ರಾತ್ರಿ ವೇಳೆಯಲ್ಲಿ ಇಲ್ಲಿ ಚಿಕಿತ್ಸೆ ಸಿಗದೇ ಜನತೆ ಪರದಾಡುತ್ತಿದ್ದಾರೆ. ಈ ಬಗ್ಗೆ ಅಧಿಕಾರಿಗಳಿಗೆ ಹೇಳಿದರೆ ಯಾವುದೇ ಪ್ರಯೋಜನವಾಗುತ್ತಿಲ್ಲವೆಂದು ಗ್ರಾ.ಪಂ ಅಧ್ಯಕ್ಷ ರಮೇಶ ನಿರ್ವಾಣಶೆಟ್ಟರ ಆರೋಪಿಸುತ್ತಿದ್ದಾರೆ.

ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಶುದ್ಧ ನೀರಿನ ಘಟಕವಿದ್ದರೂ ಸಮರ್ಪಕವಾಗಿ ನೀರು ಇಲ್ಲ, ಶೌಚಾಲಯಗಳ ಪೈಪ್‌ಲೈನ್ ಬ್ಲಾಕ್ ಆಗಿದ್ದು ದುರ್ನಾತ ಬೀರುತ್ತಿವೆ. ಹೊರಗಡೆಯಿಂದ ಶುದ್ಧ ನೀರನ್ನು ತಂದು ರೋಗಿಗಳಿಗೆ ನೀಡಲಾಗುತ್ತಿದೆ.

ಗ್ರಾ.ಪಂ ಅಧ್ಯಕ್ಷ ರಮೇಶ ನಿರ್ವಾಣಶೆಟ್ಟರ ಪ್ರತಿಕ್ರಿಯಿಸಿ, 16 ತಿಂಗಳಿನಿಂದ ಸಮಿತಿ ರಚನೆ ಮಾಡಿಲ್ಲ. ಅನುದಾನದ ಬಗ್ಗೆ ಮಾಹಿತಿ ನೀಡಿಲ್ಲ. ಸಿಬ್ಬಂದಿ ಕಚೇರಿಗೆ ಬಂದು ಸಹಿ ಮಾಡುವಂತೆ ಹೇಳುತ್ತಿದ್ದಾರೆ. ಖಾಯಂ ವೈದ್ಯರು ಇಲ್ಲದೇ ಇರುವುದರಿಂದ ಜನತೆ ತುರ್ತು ಸಂದರ್ಭದಲ್ಲಿ ತೊಂದರೆಯನ್ನು ಅನುಭವಿಸುತ್ತಿದ್ದಾರೆ. 30-40 ಹಳ್ಳಿಗಳ ಜನತೆಗೆ ವರವಾಗಬೇಕಿದ್ದ ಪ್ರಾಥಮಿಕ ಆರೋಗ್ಯ ಕೇಂದ್ರವು ಕೇವಲ ಹೆಸರಿಗಷ್ಟೇ ಸಿಮೀತವಾದಂತೆ ಕಾಣುತ್ತಿದೆ ಎಂದರು.

ಈ ಕುರಿತು ಪ್ರತಿಕ್ರಿಯಿಸಿದ ತಾಲೂಕಾ ಆರೋಗ್ಯಾಧಿಕಾರಿ ಡಾ: ಸುಭಾಸ ದೈಗೊಂಡ, ಖಾಯಂ ವೈದ್ಯಾಧಿಕಾರಿ ಇಲ್ಲದೇ ಇರುವುದರಿಂದ ಗದಗ ಜಿಮ್ಸ್‌ನಿಂದ ಟ್ರೈನಿ ಸರ್ಜನ್ ರೋಟೇಶನ್ ಪದ್ಧತಿಯಲ್ಲಿ ಬರುತ್ತಿದ್ದು, ಶೀಘ್ರದಲ್ಲಿಯೇ ಸಮಿತಿ ರಚನೆ ಮಾಡಲು ಕ್ರಮ ವಹಿಸಲಾಗುವುದು ಎಂದರು.

3 ಜನ ಸ್ಟಾಫ್ ನರ್ಸ್ ಮತ್ತು 3 ಜನ ಅಟೆಂಡರ್ ಪ್ರಾಥಮಿಕ ಆರೋಗ್ಯದಲ್ಲಿ ಕೆಲಸ ಮಾಡುತ್ತಿದ್ದಾರೆ.

ಸುಮಾರು 30-40 ಹಳ್ಳಿಗಳ ಜನತೆಯ ಆರೋಗ್ಯದ ಬಗ್ಗೆ ವಿಚಾರಿಸಬೇಕಿದ್ದ ಪ್ರಾಥಮಿಕ ಆರೋಗ್ಯ ಕೇಂದ್ರವು ಖಾಯಂ ವೈದ್ಯರಿಲ್ಲದೇ ಈ ಭಾಗದ ಸಾರ್ವಜನಿಕರು ತುಂಬಾ ತೊಂದರೆಯನ್ನು ಅನುಭವಿಸುತ್ತಿದ್ದು, ಈ ಬಗ್ಗೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಈ ಭಾಗದ ಜನತೆಯ ಆರೋಗ್ಯದ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಖಾಯಂ ವೈದ್ಯರ ನಿಯೋಜನೆಗೆ ಮುಂದಾಗುವುದು ಅವಶ್ಯವಿದೆ.

ಶಿವಾನುಭವ ಕಾರ್ಯಕ್ರಮದಲ್ಲಿ ಪೂಜ್ಯ ಶ್ರೀ ಶಾಂತಲಿಂಗ ಮಹಾಸ್ವಾಮಿಗಳ ನುಡಿ

# ವಿವೇಕಾನಂದರ ಚಿಂತನೆ, ಸಂದೇಶಗಳು ದಾರಿದೀಪ

■ವಿಜಯಸಾಕ್ಷಿ ಸುದ್ದಿ, ಗದಗ

ಸ್ವಾಮಿ ವಿವೇಕಾನಂದರು ಯುಗಪುರುಷರು. ಅವರ ತತ್ವಾದರ್ಶಗಳು, ಸಂದೇಶಗಳು ಇಡೀ ವಿಶ್ವವೇ ಭಾರತದತ್ತ ತಿರುಗಿ ನೋಡುವಂತೆ ಮಾಡಿದ್ದವು. ಸ್ವಾಮಿ ವಿವೇಕಾನಂದರ ಚಿಂತನೆ, ಸಂದೇಶಗಳು ಪ್ರಸ್ತುತ ಸಮಾಜಕ್ಕೆ, ಯುವಕರಿಗೆ ದಾರೀದಿಪ ಎಂದು ಪೂಜ್ಯ ಶ್ರೀ ಶಾಂತಲಿಂಗ ಮಹಾಸ್ವಾಮಿಗಳು ನುಡಿದರು.



ಲಿಂಗಾಯತ ಪ್ರಗತಿಶೀಲ ಸಂಘದ 2728ನೇ ಶಿವಾನುಭವದ ಸಮ್ಮುಖ ವಹಿಸಿ ಮಾತನಾಡಿದ ಶ್ರೀಗಳು, ಯುವಜನತೆಗೆ ಸಂಸ್ಕಾರ-ಸಂಸ್ಕೃತಿ, ಆಚಾರ-ವಿಚಾರ ಬೇಕು. ಯುವಶಕ್ತಿಯ ಸದ್ಬಳಕೆಯಾಗಬೇಕು. ಯುವಶಕ್ತಿ ದೇಶದ ಮಹಾನ್ ಶಕ್ತಿ ಎಂದರಿತು ವಿವೇಕಾನಂದರು ಭಾರತೀಯ ಯುವ ಆತ್ಮಗಳಲ್ಲಿ ಸ್ಫೂರ್ತಿಯನ್ನು ತುಂಬಿದರು. ಭಾರತೀಯ ಸಂಸ್ಕೃತಿಯನ್ನು ಸೂರ್ಯನಂತೆ ಜಗತ್ತಿಗೆ ಬೆಳಗಿದರು. ಸ್ವಾಮಿ ವಿವೇಕಾನಂದರು ಕೇವಲ ವ್ಯಕ್ತಿಯಲ್ಲ, ಅವರು ಒಂದು ಶಾಶ್ವತ ಪ್ರಜ್ಞೆ, ಅವರ ಹೆಸರು ಆಧ್ಯಾತ್ಮಿಕತೆಯ ಮೂಲಕ ಅನನ್ಯ ಆದರ್ಶ ಮತ್ತು ಜೀವನ ವಿಧಾನವನ್ನು ಸಾಧಿಸುವ ಪವಿತ್ರ ಸಂಕೇತವಾಗಿ ಪ್ರತಿನಿಧಿಸುತ್ತದೆ ಎಂದರು.

ಅಥಣಿಯ ಮೋಟಗಿಮಠದಿಂದ ಸಮಾಜ ಸೇವಾಭೂಷಣ ಪ್ರಶಸ್ತಿಗೆ ಭಾಜನರಾದ ಎಸ್.ಎಸ್. ಪಟ್ಟಣಶೆಟ್ಟಿ ಅವರನ್ನು ಸಂಮಾನಿಸಲಾಯಿತು. ಸನ್ಮಾನ ಸ್ವೀಕರಿಸಿ ಮಾತನಾಡಿದ ಎಸ್.ಎಸ್. ಪಟ್ಟಣಶೆಟ್ಟಿ, ಹೈಸ್ಕೂಲ್ ವಿದ್ಯಾಬ್ಯಾಸ ಮಾಡುವುದರಿಂದ ಹಿಡಿದು 1974ರಿಂದ ಇಲ್ಲಿಯವರೆಗೆ ಮಠದ ಸಂಪೂರ್ಣ ಚಿತ್ರಣವನ್ನು ತಮ್ಮ ಆ ದಿನಗಳ ಮಠದ ಸ್ಥಿತಿ ಮತ್ತು ಈಗಿನ ಸ್ಥಿತಿಯ ಬಗ್ಗೆ ಪೂಜ್ಯ ಸಿದ್ದಲಿಂಗ ಶ್ರೀಗಳ ಮಠದ ಅಭಿವೃದ್ಧಿ, ಪುಸ್ತಕ, ಪರಿಸರ, ಕನ್ನಡ ಪ್ರೇಮ ಇವುಗಳ ಬಗ್ಗೆ ತಿಳಿಸಿದರು.

ಕರ್ನಾಟಕ ಮಾಧ್ಯಮ ಅಕಾಡೆಮಿಯಿಂದ ಜೀವಮಾನದ ಸಾಧನೆಗಾಗಿ ಪ್ರಶಸ್ತಿಯನ್ನು ಪಡೆದ ನಿಮಿತ್ತ ಹನುಮಾನ್ ಸಿಂಗ್ ಜಮಾದಾರ, ಹುಬ್ಬಳ್ಳಿಯ ಪಿ.ಎಲ್.ಡಿ ಬ್ಯಾಂಕಿನ ಅಧ್ಯಕ್ಷ ಗಂಗಾಧರ ಗಾಣಿಗೇರ ಅವರನ್ನು ಸನ್ಮಾನಿಸಲಾಯಿತು. ಸಂಗೀತ ಸೇವೆಯನ್ನು ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ನಡೆಸಿಕೊಟ್ಟರು. ಧರ್ಮ ಗ್ರಂಥ ಪಠಣವನ್ನು ಸೋಮಶೇಖರ ಶಂಕ್ರಯ್ಯ ಹಿರೇಮಠ ಹಾಗೂ ವಚನ ಚಿಂತನವನ್ನು ಆದರ್ಶ ಸಂಗಪ್ಪ ಹೂಗಾರ ನಡೆಸಿಕೊಟ್ಟರು.

ದಾಸೋಹ ಸೇವೆಯನ್ನು ಅಡ್ವೋಕೇಟ್ ಗುರುಸಿದ್ದಪ್ಪ ಬುಳ್ಳಾನವರ ವಹಿಸಿದ್ದರು. ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ್ ಪುರದ, ವಿದ್ಯಾ ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮನಾಥ ಪುರಾಣಿಕ, ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ ಹಾಗೂ ಭಕ್ತರು ಉಪಸ್ಥಿತರಿದ್ದರು.

ಶಿವಾನುಭವ ಸಮಿತಿಯ ಚೇರ್ಮನ್ ಐ.ಬಿ. ಬೆನಕೊಪ್ಪ ಸಂಮಾನಿತರನ್ನು ಪರಿಚಯಿಸಿದರು. ಸ್ವಾಗತವನ್ನು ಸಮಿತಿಯ ಸಹ ಚೇರ್ಮನ್ ಶಿವಾನಂದ ಹೊಂಬಳರವರು ಮಾಡಿದರೆ, ವಿದ್ಯಾ ಪ್ರಭು ಗಂಜಿಹಾಳ ನಿರೂಪಿಸಿದರು.

ಉಪನ್ಯಾಸಕರಾಗಿ ಆಗಮಿಸಿದ ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಎ. ಬಳಿಗೇರ ಮಾತನಾಡಿ, ಸ್ವಾಮಿ ವಿವೇಕಾನಂದರು ಭಾರತದ ಹೆಮ್ಮೆಯ ವೀರ ಸಂನ್ಯಾಸಿ. ಅವರ ಸಂದೇಶಗಳು ಯುವಜನರಿಗೆ ಸ್ಫೂರ್ತಿಯ ಚಿಲುಮೆಯಾಗಿದ್ದವು. ಮಾನವೀಯತೆಯ ಔದಾರ್ಯ, ಶುದ್ಧತೆಯಲ್ಲಿ, ಶಾಂತತೆಯಲ್ಲಿ ಜಗತ್ತಿನಲ್ಲಿಯೇ ಅತ್ಯುನ್ನತ ಸ್ಥಾನ ಪಡೆದ ಭೂಮಿ ಭಾರತವೆಂದು ಜಗತ್ತಿಗೆ ಸಾರಿದ ವೀರ ಸಂನ್ಯಾಸಿ ವಿವೇಕಾನಂದರು ಎಂದರು.

## ಗ್ರಾಮೀಣ ಸಂಘಟನಾ ಕಾರ್ಯಾಧ್ಯಕ್ಷರ ನೇಮಕ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ನಾದಿಗಟ್ಟಿ ಗ್ರಾಮದ ಯುವ ಮುಖಂಡ ಮಲ್ಲೇಶಪ್ಪ ರಾ.ವಡ್ಡರ ಅವರನ್ನು ಕರ್ನಾಟಕ ಅಹಿಂದ ಜನ ಸಂಘ ಬೆಂಗಳೂರು ಇದರ ರಾಜ್ಯ ಗ್ರಾಮೀಣ ಸಂಘಟನಾ ಕಾರ್ಯಾಧ್ಯಕ್ಷರ ಹುದ್ದೆಗೆ ಕರ್ನಾಟಕ ಅಹಿಂದ ಜನ ಸಂಘ ಸಂಸ್ಥಾಪಕ ರಾಜ್ಯಾಧ್ಯಕ್ಷ ಅಯ್ಯಪ್ಪಗೌಡ ಅವರು ನೇಮಕ ಮಾಡಿದ್ದಾರೆ.

ಅಹಿಂದ ಜನರ ಶ್ರೇಯೋಭಿವೃದ್ಧಿಗಾಗಿ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕವಾಗಿ ಅಹಿಂದ ಜನ ಸಮುದಾಯದವರನ್ನು ಮುಖ್ಯ ವಾಹಿನಿಗೆ ತರುವ ಹಾಗೂ ಸಂಘಟನೆ, ಬಲವರ್ಧನೆಗಾಗಿ ಸಂಘಟನೆಯಲ್ಲಿ ಮಲ್ಲೇಶಪ್ಪ ವಡ್ಡರ ಅವರನ್ನು ರಾಜ್ಯ ಕಾರ್ಯಾಧ್ಯಕ್ಷ ಹುದ್ದೆಗೆ ನೇಮಕ ಮಾಡಲಾಗಿದೆ ಎಂದು ಸಂಸ್ಥಾಪಕ ರಾಜ್ಯಾಧ್ಯಕ್ಷರು ತಿಳಿಸಿದ್ದಾರೆ.

## ಇಂದು ಪೂರ್ವಭಾವಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಈ ವರ್ಷ ಫೆಬ್ರವರಿ 1 ರಂದು ಆಚರಿಸಲಾಗುವ ಮಡಿವಾಳ ಮಾಚಿದೇವರ ಜಯಂತಿ ನಿಮಿತ್ತ ಜನವರಿ 21 ರಂದು ಸಂಜೆ 4 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು, ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ಸಭೆಗೆ ಹಾಜರಾಗಿ ಸಲಹೆ/ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಕಾಲ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಡಿ.ಸಿ ಸಿ.ಎನ್. ಶ್ರೀಧರ್ ಸೂಚನೆ

# ಅರ್ಜಿಗಳ ಶೀಘ್ರ ವಿಲೇವಾರಿಗೆ ಕ್ರಮ ವಹಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸಕಾಲ ಯೋಜನೆಯಡಿ ಸ್ವೀಕರಿಸಲಾದ ಅರ್ಜಿಗಳನ್ನು ನಿಗದಿತ ಅವಧಿಯಲ್ಲಿಯೇ ವಿಲೇವಾರಿ ಮಾಡುವಂತೆ ಅಧಿಕಾರಿಗಳು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ಸಕಾಲ ಯೋಜನೆಯ ಜಿಲ್ಲಾ ಮಟ್ಟದ ವಿವಿಧ ಇಲಾಖಾಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಕಾಲದಲ್ಲಿ ಅರ್ಜಿ ಸ್ವೀಕರಿಸುವಾಗ ಅರ್ಜಿಯ ಜೊತೆಗೆ ನಿಗದಿಪಡಿಸಿದ ದಾಖಲಾತಿಗಳ ಸಮೇತ ಸ್ವೀಕರಿಸಬೇಕು. ಸಕಾಲ ಯೋಜನೆಯಡಿ ಇಲಾಖೆಗಳಿಗೆ ನಿಗದಿಪಡಿಸಿದ ಯೋಜನೆಗಳಲ್ಲಿ ಕಡ್ಡಾಯವಾಗಿ ಅರ್ಜಿಗಳನ್ನು ಸ್ವೀಕರಿಸಬೇಕು. ತಾಂತ್ರಿಕ ತೊಂದರೆಗಳು ಉಂಟಾದಲ್ಲಿ ಸಮಸ್ಯೆಗಳಿಗೆ ಪರಿಹಾರ ಕಂಡುಕೊಂಡು ಅರ್ಜಿಗಳ ವಿಲೇವಾರಿಗೆ ಕ್ರಮ ವಹಿಸಬೇಕು ಎಂದರು.



ಸಾರ್ವಜನಿಕರಿಗೆ ಸಕಾಲದಲ್ಲಿ ಸೇವೆ ಒದಗಿಸುವ ಉದ್ದೇಶಕ್ಕಾಗಿಯೇ ಸಕಾಲ ಯೋಜನೆ ಜಾರಿಗೊಳಿಸಲಾಗಿದ್ದು, ಈ ಕುರಿತು ಹೆಚ್ಚು ನಿಗಾ ವಹಿಸುವ ಮೂಲಕ ಯೋಜನೆಯನ್ನು ಯಶಸ್ವಿಗೊಳಿಸಬೇಕು. ಸಕಾಲದಲ್ಲಿ ಸ್ವೀಕರಿಸಿದ ಅರ್ಜಿಗಳನ್ನು ನಿಗದಿಪಡಿಸಿದ ವೇಳೆಯಲ್ಲಿ ವಿಲೇವಾರಿ ಮಾಡದಿದ್ದಲ್ಲಿ ಇಲಾಖೆಯ ಅಧಿಕಾರಿಗಳೇ ಹೊಣೆಗಾರರಾತ್ತಾರೆ ಹಾಗೂ ಶಿಸ್ತು ಕ್ರಮಕ್ಕೆ ಒಳಗಾಗಬೇಕಾಗುತ್ತದೆ. ಸಕಾಲ ಯೋಜನೆಯ ಜಿಲ್ಲಾ ಮಟ್ಟದ ಸಭೆಗೆ ಅಧಿಕಾರಿಗಳು ತಪ್ಪದೇ ಹಾಜರಾಗಬೇಕು ಎಂದರು.

ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಮಾತನಾಡಿ, ಇಲಾಖೆಯ ಅಧಿಕಾರಿಗಳು ಸಕಾಲ ಯೋಜನೆಯಡಿ ಸ್ವೀಕರಿಸಿದ ಅರ್ಜಿಗಳ ವಿಲೇವಾರಿಗೆ ಶೀಘ್ರ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಸಮಾಜ ಕಲ್ಯಾಣ, ನಗರಸಭೆ, ಕೆ.ಎಸ್.ಆರ್.ಟಿ.ಸಿ ಸೇರಿದಂತೆ ವಿವಿಧ ಇಲಾಖೆಯವರು ಸಕಾಲ ಯೋಜನೆಯ ಅರ್ಜಿಗಳ ವಿಳಂಬ ತಪ್ಪಿಸಿ ಶೀಘ್ರ ವಿಲೇವಾರಿಗೆ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಸಭೆಯಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸವರಾಜ ಕೊಟ್ಟೂರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ವಿನೋದ ಕುಮಾರ್ ಹೆಗ್ಗಳಗಿ, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಶಶಿಕಾಂತ ಕೋಟಿಮನಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

## ಸಾಮಾಜಿಕ ಜವಾಬ್ದಾರಿಯಿಂದ ಬೆಳವಣಿಗೆ ಸಾಧ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕ್ಲರ್ಕ್ ಇನ್ ಹೋಟೆಲ್‌ನಲ್ಲಿ ಗದಗ ಜಿಲ್ಲಾ ಅಂಬಿಗರ ಗಂಗಾಮತ ಸಮಾಜದ ವಧು-ವರರ ಸಮಾವೇಶ ಏರ್ಪಡಿಸಲಾಗಿತ್ತು.




ಸಮಾವೇಶದ ಸಂಚಾಲಕರಾದ ದೇವೇಂದ್ರ ಅಂಬಿಗೇರ ಸರ್ವರನ್ನ ಸ್ವಾಗತಿಸಿ ವಧು-ವರರ ಮಾಹಿತಿಯನ್ನು ಪಿಪಿಟಿ ಮೂಲಕ ಹೇಳಿದರು. ಸಭೆಯ ಅಧ್ಯಕ್ಷತೆಯನ್ನು ಸಮಾಜದ ಮುಖಂಡ ಬಿ.ಎನ್. ಯರನಾಳ ವಹಿಸಿ ಮಾತನಾಡಿ, ದೇವೇಂದ್ರ ಅಂಬಿಗೇರರು ಇಂತಹ ಕಲ್ಯಾಣ ಕಾರ್ಯಕ್ರಮಗಳನ್ನು ಪ್ರತಿ ವರ್ಷ ಮಾಡುತ್ತ ಬಂದಿರುವುದು ಸಂತೋಷದ ವಿಚಾರ. ಇಂತಹ ಕೆಲಸಗಳಲ್ಲಿ ಎಲ್ಲರೂ ಸಾಮಾಜಿಕ ಜವಾಬ್ದಾರಿ ತೆಗೆದುಕೊಂಡಾಗ ಮಾತ್ರ ಸಾಮಾಜಿಕ ಬೆಳವಣಿಗೆ ಸಾಧ್ಯ ಎಂದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಅಂಬಿಗ ಸಮಾಜದ ಪ್ರಧಾನ ಕಾರ್ಯದರ್ಶಿ ಸಂಗಮೇಶ ಹಾದಿಮನಿ, ಐ.ಟಿ. ಸುಣಗಾರ, ಜಗದೀಶ ಅಂಬಿಗೇರ, ಚಂದ್ರಶೇಖರ ಅಂಬಿಗೇರ, ಗುರು ತಿರ್ಲಾಪೂರ, ರಮೇಶ ಸಂಕಣ್ಣವರ, ದೇವರಾಜ ಬಾರಕೇರ, ಶಂಕರ ಅಂಬಿಗೇರ, ಶಶಾಂಕ ಅಂಬಿಗೇರ, ಸುಜಾತ ಸುಣಗಾರ ಸೇರಿದಂತೆ ಸಮಾಜ ಬಾಂಧವರು ಉಪಸ್ಥಿತರಿದ್ದರು.

## ನೂತನ ಪದಾಧಿಕಾರಿಗಳ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ಗದಗ ಜಿಲ್ಲಾ ಯುವ ಘಟಕದ ಗದಗ ತಾಲೂಕು ಗ್ರಾಮೀಣ ಯುವ ಘಟಕ ಅಧ್ಯಕ್ಷರಾಗಿ ಮಂಜುನಾಥ್ ಗುಡದೂರ, ಪ್ರಧಾನ ಕಾರ್ಯದರ್ಶಿಗಳಾಗಿ ಸಂತೋಷ ಬಳ್ಳಾರಿ, ಸಂಘಟನಾ ಕಾರ್ಯದರ್ಶಿಯಾಗಿ ಮಂಜುನಾಥ್ ಗದಗಿನ, ಉಪಾಧ್ಯಕ್ಷರಾಗಿ ಶಿವಾನಂದ ಇನಾಮತಿ, ಮಂಜುನಾಥ್ ಕರುಗಲ್ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.



ಈ ಸಂದರ್ಭದಲ್ಲಿ ಪಂಚಮಸಾಲಿ ಸಮಾಜದ ಪ್ರಮುಖರಾದ ನೀಲಕಂಠಪ್ಪ ಮಲಕಾಜಪ್ಪ ಕೊಟಗಿ, ಪಂಚಮಸಾಲಿ ಸಮಾಜದ ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕಿನ ಗುತ್ತಿಗೆದಾರರ ಸಂಘದ ನೂತನ ಅಧ್ಯಕ್ಷ ಬಸವರಾಜ್ ತುಳಿ ಅವರನ್ನು ಸನ್ಮಾನಿಸಲಾಯಿತು.

ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆ.ಕೆ. ಮಲಗೌಡರ್, ಸಮಾಜದ ಹಿರಿಯರಾದ ಬಿ.ಎಸ್. ಚಿಂಚಳ್ಳಿ, ಸಿ.ಬಿ. ಪಲ್ಲೇದ್, ಎಸ್.ವಿ. ಪಲ್ಲೇದ್, ಭದ್ರೇಶ ಕುಸಲಾಪುರ, ಗದಗ ಜಿಲ್ಲಾ ಯುವ ಘಟಕದ ಅಧ್ಯಕ್ಷ ಸಂತೋಷ ಅಕ್ಕಿ ಉಪಸ್ಥಿತರಿದ್ದರು.

### ಶತರುದ್ರಯಾಗ ಪೂಜಾ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

## ಪರಮಾತ್ಮನನ್ನು ಪೂಜಿಸಿ ಜೀವನ ಸಾರ್ಥಕಗೊಳಿಸಿ

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಸುಖ-ದುಃಖ ಶಾಶ್ವತವಲ್ಲ. ಹಗಲು-ರಾತ್ರಿಯಂತೆ ಸದಾ ತಿರುಗುತ್ತಲೇ ಇರುತ್ತವೆ. ಮನುಷ್ಯನ ಜೀವನ ಬಹಳಷ್ಟು ಒತ್ತಡಗಳಿಂದ ಕೂಡಿದೆ. ಒಂದಿಷ್ಟಾದರೂ ಆಧ್ಯಾತ್ಮಿಕ ಚಿಂತನೆಗಳನ್ನು ಅಳವಡಿಸಿಕೊಂಡು ಬಾಳಿದರೆ ಜೀವನದಲ್ಲಿ ಸುಖ, ಶಾಂತಿ ಕಾಣಲು ಸಾಧ್ಯವಾಗುವುದೆಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಸೋಮವಾರ ಶ್ರೀ ರಂಭಾಪುರಿ ಪೀಠದಲ್ಲಿ ಲೋಕ ಕಲ್ಯಾಣಕ್ಕಾಗಿ ಹಮ್ಮಿಕೊಂಡ ಶತರುದ್ರಯಾಗ ಪೂಜಾ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯನಿಗೆ ಆಧ್ಯಾತ್ಮಿಕ ಆದಿಭೌತಿಕ ಮತ್ತು ಆದಿ ದೈವಿಕ ಎಂಬ ಮೂರು ದುಃಖಗಳಿಂದ ಬಂಧಿತನಾಗಿದ್ದಾನೆ. ಈ ದುಃಖ, ತಾಪತ್ರಯಗಳಿಂದ ಮುಕ್ತನಾಗಲು ಭಗವಂತನ ಚಿಂತನೆ, ಧ್ಯಾನ, ಪೂಜೆಯ ಅವಶ್ಯಕತೆಯಿದೆ. ಯಾವುದರಲ್ಲಿ ಈ ಜಗತ್ತು ಹುಟ್ಟಿ ಕೊನೆಗೆ ಯಾವುದರಲ್ಲಿ ಕೊನೆಗೊಳ್ಳುವುದೋ ಅಂಥ ಪರಮಾತ್ಮನನ್ನು ಪೂಜಿಸಿ ಜೀವನ ಸಾರ್ಥಕಪಡಿಸಿಕೊಳ್ಳಬೇಕಾಗಿದೆ. ಭಗವಂತ ಕೊಟ್ಟ ಕೊಡುಗೆಗೆ ಸರಿಸಾಟಿಯಾದುದು ಜಗದಲ್ಲಿ ಇನ್ನೊಂದು ಯಾವುದೂ ಇಲ್ಲ.



ಧಾರ್ಮಿಕ ವಿಧಿ-ವಿಧಾನಗಳು ಜೀವನ ಶ್ರೇಯಸ್ಸಿಗಾಗಿ ಇವೆಯೇ ಹೊರತು ಅವನತಿಗಲ್ಲ. ಪ್ರಾಚೀನ ಪರಂಪರೆ, ಆದರ್ಶಗಳನ್ನು ನಿರ್ಲಕ್ಷಿಸಬಾರದು. ಈ ವಿಧಿ-ವಿಧಾನಗಳಿಂದ ಪರಮಾತ್ಮನ ಸಂಪ್ರೀತಿಯನ್ನು ಜೀವಾತ್ಮ ಪಡೆಯಲು ಸಾಧ್ಯವಾಗುತ್ತದೆ. ಇವುಗಳ ಆಚರಣೆಯಿಂದಾಗುವ ಪ್ರಯೋಜನವನ್ನು ಶಾಸ್ತ್ರಗಳು ನಮಗೆ ಬೆಳಕು ತೋರುತ್ತವೆ. ಉತ್ತರಾಯಣ ಪುಣ್ಯಕಾಲ ಪ್ರಾಪ್ತವಾದ ಶುಭ ದಿನದಲ್ಲಿ ಲೋಕ ಕಲ್ಯಾಣ-ಸಾಮರಸ್ಯ ಸೌಹಾರ್ದತೆಯ ಬದುಕಿಗಾಗಿ ಮೂರು ದಿನಗಳ ಕಾರ್ಯಕ್ರಮ ತಮಗೆ ತೃಪ್ತಿ ತಂದಿದೆ. ಜಗನ್ನಿಯಾಮಕನಾದ ಪರಮಾತ್ಮ ಸಕಲರಿಗೂ ಶಾಂತಿ-ಸನ್ಮಂಗಲವನ್ನು ಅನುಗ್ರಹಿಸಲೆಂದು ಹಾರೈಸಿದರು.

ಸಮಾರಂಭದಲ್ಲಿ ಪಾಲ್ಗೊಂಡ ರಾಯಚೂರು ಕಿಲ್ಲಾ ಬೃಹನ್ಮಠದ ಶಾಂತಮಲ್ಲ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಪೂರ್ವದ ಋಷಿ ಮುನಿಗಳು ಮತ್ತು ಆಚಾರ್ಯರು ಮಾನವನ ಸುಖ ಸಮೃದ್ಧಿಯ ಬದುಕಿಗಾಗಿ ಹಲವಾರು ನೀತಿ ಸಂಹಿತೆ ಬೋಧಿಸಿದ್ದಾರೆ. ಅರಿವಿನ ಹಾದಿಯಲ್ಲಿ ನಡೆದು ಮಾನವ ಜೀವನ ಸಾರ್ಥಕಪಡಿಸಿಕೊಳ್ಳಬೇಕಾಗಿದೆ. ಮಾನಸಿಕ ಶಾಂತಿ, ಜೀವನ ಶ್ರೇಯಸ್ಸಿಗಾಗಿ ಧರ್ಮದ ನೀತಿ ಸೂತ್ರಗಳನ್ನು ಎಲ್ಲರೂ ಪರಿಪಾಲಿಸಿಕೊಂಡು ಮುನ್ನಡೆಯಬೇಕಾಗಿದೆ ಎಂದರು.

ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಕುಲಪತಿಗಳಾದ ಬೆಳಗಾಲಪೇಟೆ ಸಿದ್ಧಲಿಂಗಯ್ಯ ಶಾಸ್ತ್ರಿಗಳು ಶಾಸ್ತ್ರೋಕ್ತವಾಗಿ ಅತಿರುದ್ರಯಾಗ ಪೂಜಾ ವಿಧಿ ವಿಧಾನಗಳನ್ನು ಗುರುಕುಲ ಸಾಧಕರೊಂದಿಗೆ ನೆರವೇರಿಸಿದರು.

ಗುರುಕುಲ ಸಾಧಕರಿಂದ ಪ್ರಾರ್ಥನೆ ಜರುಗಿತು. ಶ್ರೀ ಜಗದ್ಗುರು ರುದ್ರಮುನೀಶ್ವರ ವಸತಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ವೀರೇಶ ಕುಲಕರ್ಣಿ ನಿರೂಪಿಸಿದರು.

## ಕನ್ನಡ ಮಾಧ್ಯಮ ಕೃಪಾಂಕ ಕುರಿತು ಚರ್ಚೆಗೆ ಸಿದ್ಧ

▶▶ ಮೊದಲನೇ ಪುಟದಿಂದ

ಸಮ್ಮೇಳನದ ವೇದಿಕೆಯಲ್ಲಿ 'ಅಂತರಗಂಗೆ' ಸ್ಮರಣ ಸಂಚಿಕೆಯನ್ನು ಶಾಸಕ ಜಿ.ಎಸ್. ಪಾಟೀಲ ಬಿಡುಗಡೆಗೊಳಿಸಿದರು. ಸಮ್ಮೇಳನದ ಸರ್ವಾಧ್ಯಕ್ಷರನ್ನು, ಸಾಧಕರನ್ನು ಸನ್ಮಾನಿಸಲಾಯಿತು. ಗದಗ ತೋಂಟದಾರ್ಯ ಮಠದ ಸಿದ್ಧರಾಮ ಶ್ರೀಗಳು, ಮೈಸೂರುಮಠದ ವಿಜಯಮಾಂತ ಶ್ರೀಗಳು ಸಾನ್ನಿಧ್ಯ ವಹಿಸಿದ್ದರು.

ಸಮ್ಮೇಳನದ ಸರ್ವಾಧ್ಯಕ್ಷ ಪ್ರೊ. ಚಂದ್ರಶೇಖರ ವಸ್ತ್ರದ, ಮಾಜಿ ಸಚಿವ ಎಸ್.ಎಸ್. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ, ಮಿಥುನ್ ಪಾಟೀಲ, ಟಿ. ಈಶ್ವರ, ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಸಿಇಓ ಭರತ್ ಎಸ್, ಸಾಹಿತಿ ರವೀಂದ್ರನಾಥ ದೊಡ್ಡಮೇಟಿ, ವೀರಣ್ಣ ಶೆಟ್ಟರ, ಪರಶುರಾಮ ಅಳಗವಾಡಿ, ವಿ.ಆರ್. ಗುಡಿಸಾಗರ, ಮುತ್ತಣ್ಣ ಕಡಗದ, ಪ್ರಶಾಂತ ರಾಠೋಡ, ಅಪ್ಪು ಮತ್ತಿಕಟ್ಟಿ, ಮುಕ್ತುಂಸಾಬ್ ಮುದೊಳ, ರಫೀಕ್ ತೋರಗಲ್, ಅಶೋಕ ಬಾಗಮಾರ, ಪುರಸಭೆ ಅಧ್ಯಕ್ಷ, ಉಪಾಧ್ಯಕ್ಷರು ಸೇರಿದಂತೆ ಇತರರು ಹಾಜರಿದ್ದರು.

## ವಹಿಸಿದ ಜವಾಬ್ದಾರಿಯನ್ನು ದಕ್ಷತೆಯಿಂದ ನಿಭಾಯಿಸಿ

▶▶ ಮೊದಲನೇ ಪುಟದಿಂದ

ಇಲಾಖಾಧಿಕಾರಿಗಳಿಗೆ ಗಣರಾಜ್ಯೋತ್ಸವದ ಆಚರಣೆ ಕುರಿತಂತೆ ವಹಿಸಲಾಗಿರುವ ಜವಾಬ್ದಾರಿಯನ್ನು ಸರಿಯಾಗಿ ನಿಭಾಯಿಸಬೇಕೆಂದರು.

ಸಭೆಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಮದ ವ್ಯವಸ್ಥೆ, ಎನ್‌ಎಸ್‌ಎಸ್ ಹಾಗೂ ಎನ್‌ಸಿಸಿ ಪರೇಡ್, ಮೂಲಭೂತ ಸೌಕರ್ಯಗಳ ವ್ಯವಸ್ಥೆ ವಿಷಯಗಳ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ಗಂಗಪ್ಪ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸವರಾಜ ಕೊಟ್ಟೂರ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ವಿನೋದಕುಮಾರ್ ಹೆಗ್ಗಳಗಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಭೂ ದಾಖಲೆ ಇಲಾಖೆ ಉಪನಿರ್ದೇಶಕ ರುದ್ರಗೌಡ, ಸಂಖ್ಯಾ ಸಂಗ್ರಹಣಾಧಿಕಾರಿ ಎ.ಎ. ಕಂಬಾಳಿಮಠ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ವೇಮನರ ತತ್ವ-ಸಿದ್ಧಾಂತಗಳೊಂದಿಗೆ ಜಾಗೃತ ಸಮಾಜ ನಿರ್ಮಿಸೋಣ

▶▶ ಮೊದಲನೇ ಪುಟದಿಂದ

ಇತಿಹಾಸವನ್ನು ಹೆಕ್ಕಿ ತೆಗೆದು ವೇಮನ ಅವರ ಇತಿಹಾಸ ಸಾಹಿತ್ಯವನ್ನು ಪರಿಚಯಿಸಿ ಜನವರಿ 19ನ್ನು ವೇಮನ ಜಯಂತಿ ಆಚರಣೆ ಮಾಡಿ ಕರ್ನಾಟಕ ತುಂಬಾ ಅವರ ಸಿದ್ಧಾಂತವನ್ನು ತಲುಪಿಸೇಕು ಎಂದು ನಿರ್ಣಯ ಮಾಡಿದರು.

ರೆಡ್ಡಿ ಸಮಾಜದವರು ಎಲ್ಲಾ ಪಕ್ಷಗಳಲ್ಲಿದ್ದು, ಜಾತಿ ಆಧಾರದ ಮೇಲೆ ರಾಜಕೀಯ ಮಾಡದೇ ಯೋಗ್ಯತೆ, ಸೇವೆ, ಸಾಮರ್ಥ್ಯಕ್ಕೆ ತಕ್ಕಂತೆ ಗೌರವವನ್ನು ಪಡೆದು ಎಲ್ಲಾ ಸಮಾಜದವರನ್ನು ಅಪ್ಪಿಕೊಳ್ಳುವ ಮನಸ್ಥಿತಿ ಹೊಂದಿ, ಶೋಷಣೆಯ ವಿರುದ್ಧ ನ್ಯಾಯಕ್ಕಾಗಿ ಹೋರಾಟ ಮಾಡುವ ಮನಸ್ಸನ್ನು ಹೊಂದಿದವರಾಗಿದ್ದಾರೆ ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಸಮಾಜ, ಮನುಕುಲದ ಉದ್ಧಾರಕ್ಕಾಗಿ ಜೀವನವನ್ನು ತ್ಯಾಗ ಮಾಡಿದ್ದಕ್ಕಾಗಿ ಮಹಾಯೋಗಿ ವೇಮನರ ಜಯಂತಿಯನ್ನು ಆಚರಣೆ ಮಾಡಲಾಗುತ್ತಿದೆ. ವೇಮನರು 15ನೇ ಶತಮಾನದಲ್ಲಿ ಕವಿತೆಗಳನ್ನು ರಚಿಸಿದರು. ಅವುಗಳಲ್ಲಿ ಹೆಚ್ಚಿನವು ನಶಿಸಿ ಹೋಗಿವೆ. ಒಬ್ಬ ಬ್ರಿಟೀಷ್ ಅಧಿಕಾರಿ ತಾಳೆಗರಿಯಲ್ಲಿ ಬರೆದ ಕವಿತೆಗಳನ್ನು ಪುಸ್ತಕ ರೂಪದಲ್ಲಿ ಪ್ರಕಟಿಸಿದರು ಎಂದರು.

ವೇಮನರು ದುಶ್ಚಟಕ್ಕೆ ದಾಸರಾಗಿರುತ್ತಾರೆ. ಆಗ ಅವರನ್ನು ಸರಿದಾರಿಗೆ ತಂದವರು ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನವರು. ಅವರಿಂದ ವೇಮನರು ಪರಿವರ್ತನೆ ಹೊಂದಿ, ಸಮಾಜ ಸುಧಾರಣೆಯಲ್ಲಿ ತಮ್ಮನ್ನು ತೊಡಗಿಸಿಕೊಂಡು ಅಗಾಧ ಸಾಧನೆ ಮಾಡಿದ್ದಾರೆ ಎಂದು ಮಹಾಯೋಗಿ ವೇಮನರು ಹಾಗೂ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನವರ ಜೀವನ ಸಾಧನೆಗಳನ್ನು ಕೊಂಡಾಡಿದರು.

ಶೇಖಣ್ಣ ಪ್ರಾಸ್ತವಿಕವಾಗಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಉತ್ತಮ ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ, ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹನಿಯರಿಗೆ ಸತ್ಕರಿಸಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಮಾಜಿ ಸಚಿವ ಬಿ.ಆರ್. ಯಾವಗಲ್, ಕೆ.ವಿ. ಹಂಚಿನಾಳ, ಜಿಲ್ಲಾಧಿಕಾ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಎಸಿ ಗಂಗಪ್ಪ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು. ಶಿವನಗೌಡರ ಸ್ವಾಗತಿಸಿದರು, ಬಾಹುಬಲಿ ಜೈನ್ ನಿರೂಪಿಸಿದರು.

### ಸ್ಕೌಟ್ಸ್-ಗೈಡ್ಸ್ ನಾಯಕರ ತರಬೇತಿ ಕಾರ್ಯಕ್ರಮ ಉದ್ಘಾಟಿಸಿದ ಶಾಸಕ ಡಾ. ಚಂದ್ರು ಲಮಾಣಿ

## ವಿದ್ಯಾರ್ಥಿಗಳ ಮೊಬೈಲ್ ಬಳಕೆಯನ್ನು ನಿಯಂತ್ರಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿದ್ಯಾರ್ಥಿಗಳು ಜೀವನದಲ್ಲಿ ಶಿಸ್ತು, ಪ್ರಾಮಾಣಿಕತೆಯ ಜೊತೆಗೆ ಕಠಿಣ ಪರಿಶ್ರಮದಿಂದ ಉತ್ತಮ ಸಾಧನೆ ಮಾಡಬಹುದಾಗಿದ್ದು, ವಿದ್ಯಾರ್ಥಿಗಳಲ್ಲಿ ಶಿಸ್ತು, ಧೈರ್ಯ ಹಾಗೂ ಸೇವಾ ಮನೋಭಾವನೆ ಬೆಳೆಸುವಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್ ಸಹಕಾರಿಯಾಗುತ್ತದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಎಸ್‌ಎಸ್‌ಬಿಆರ್ ಅಂಬೇಡ್ಕರ್ ಶಾಲೆಯಲ್ಲಿ ಸೋಮವಾರ ಲಕ್ಷ್ಮೇಶ್ವರ ಮತ್ತು ಶಿರಹಟ್ಟಿ ಸ್ಕೌಟ್ಸ್ ಮತ್ತು ಗೈಡ್ಸ್ ಸ್ಥಳೀಯ ಸಂಸ್ಥೆಯ ಘಟಕ ಹಾಗೂ ಎಸ್‌ಎಸ್‌ಬಿಆರ್ ಅಂಬೇಡ್ಕರ್ ಶಾಲೆಯ ಸಹಯೋಗದಲ್ಲಿ 2024-25ನೇ ಸಾಲಿನ ತಾಲೂಕು ಮಟ್ಟದ ಘಟಕಗಳ ನಾಯಕರ ತರಬೇತಿ ಹಾಗೂ ದ್ವಿತೀಯ ಸೋಪಾನ ಪರೀಕ್ಷೆಗಳ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸ್ಕೌಟ್ಸ್ ಮತ್ತು ಗೈಡ್ಸ್‌ನ ಸಮಾಜಮುಖಿ ಕೆಲಸಗಳು ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಸಾಮಾಜಿಕ ಸೇವಾ ಮನೋಭಾವ ಬೆಳೆಸುವಲ್ಲಿ ಸಹಕಾರಿಯಾಗುತ್ತದೆ. ಇತ್ತೀಚಿನ ದಿನಗಳಲ್ಲಿ ಮಕ್ಕಳ ಕೈಯಲ್ಲಿ ಮೊಬೈಲ್ ಹಾವಳಿ ಹೆಚ್ಚಾಗಿದ್ದು, ಇದು ವಿದ್ಯಾರ್ಥಿ ಜೀವನದ ಮೇಲೆ ದುಷ್ಪರಿಣಾಮ ಬೀರುತ್ತದೆ. ಮಾನಸಿಕ ಆರೋಗ್ಯದ ಮೇಲೆಯೂ ಇದು ಕೆಟ್ಟ ಪರಿಣಾಮ ಬೀರುತ್ತದೆ. ಇದನ್ನು ಎಲ್ಲ ಪಾಲಕರು ಅರಿತುಕೊಳ್ಳಬೇಕು. ಅನಾವಶ್ಯಕವಾಗಿ ವಿದ್ಯಾರ್ಥಿಗಳಲ್ಲಿ ಮೊಬೈಲ್ ಬಳಕೆಯನ್ನು ನಿಯಂತ್ರಿಸಿ, ಪುಸ್ತಕ ಓದುವ ಗೀಳು ಬೆಳೆಸಿಕೊಳ್ಳಿ ಎಂದು ಸಲಹೆ ನೀಡಿದರು.



ಸ್ಕೌಟ್ಸ್, ಗೈಡ್ಸ್‌ನ ತಾಲೂಕಾ ಕಾರ್ಯದರ್ಶಿ ಕೆ.ಆರ್. ಲಮಾಣಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಾಲೆಯ ಮುಖ್ಯೋಪಾಧ್ಯಾಯ ಕೆ. ರವಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಎಸ್. ಹರ್ಲಾಪೂರ, ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರ್ಗಣ್ಣವರ, ಸದಸ್ಯ ರಾಮು ಗಡದವರ, ಸ್ಕೌಟ್ಸ್, ಗೈಡ್ಸ್ ತಾಲೂಕಾ ನಿರ್ದೇಶಕರುಗಳಾದ ಡಿ.ಎಂ. ಪೂಜಾರ, ಈರಣ್ಣ ಅಕ್ಕೂರ, ಎಂ.ಎ. ಬುಕ್ಕಿಟ್ಟಗಾರ, ಜಿ.ಎ. ಹುಲಸೂರ, ಸಿಆರ್‌ಪಿ ಸತೀಶ ಬೋಮಲೆ, ಬಿ.ಎಸ್. ಬಂಕಾಪೂರ, ಡಿ.ಡಿ. ಲಮಾಣಿ ಹಾಗೂ ಶಿಕ್ಷಕರು, ವಿವಿಧ ಶಾಲೆಗಳ ಸ್ಕೌಟ್ಸ್-ಗೈಡ್ಸ್ ಮುಖ್ಯಸ್ಥರು ಉಪಸ್ಥಿತರಿದ್ದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯಕ್ ಮಾತನಾಡಿ, ಸ್ಕೌಟ್ಸ್ ಮತ್ತು ಗೈಡ್ಸ್‌ನ ಸಮಾಜಮುಖಿ ಕೆಲಸಗಳು ಪ್ರತಿಯೊಬ್ಬರಲ್ಲಿ ದೇಶಪ್ರೇಮ ಸಾರುವ ಯೋಜನೆಗಳನ್ನು ಹೊಂದಿದ್ದು, ಶಿಸ್ತು, ಮುಖಂಡತ್ವ ಗುಣ, ದೇಶಭಕ್ತಿ, ಆತ್ಮಸ್ಥೈರ್ಯ, ಧೈರ್ಯ ಹಾಗೂ ಸೇವಾ ಮನೋಭಾವ ಬೆಳೆಸಿಕೊಳ್ಳಲು ಸಾಧ್ಯವಾಗುತ್ತದೆ. ಶಿಕ್ಷಕರು ಮತ್ತು ಮಕ್ಕಳು ಮುಕ್ತವಾಗಿ ಭಾಗವಹಿಸಿ ಸ್ಕೌಟ್ಸ್ ಮತ್ತು ಗೈಡ್ಸ್‌ನ ಅನುಕೂಲ ಪಡೆಯುವದರೊಂದಿಗೆ ಸಮಾಜ ಸೇವೆಯಲ್ಲಿ ತೊಡಗಿಸಿಕೊಳ್ಳಿ ಎಂದು ಹೇಳಿದರು.

ಉಪಾಧ್ಯಕ್ಷ ಡಿ.ಡಿ. ಲಮಾಣಿ ನಿರೂಪಿಸಿದರು. ಶಾಲೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ಮಕ್ಕಳನ್ನು ಗೌರವಿಸಲಾಯಿತು.

# ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ





■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಮುಳಗುಂದ ವಿಭಾಗದ ಪ್ರಾಥಮಿಕ ಶಿಕ್ಷಕ-ಶಿಕ್ಷಕಿಯರ ಪತ್ತು ಬೆಳೆಸುವ ಸಹಕಾರಿ ಸಂಘದ ನೂತನ ಅಧ್ಯಕ್ಷರಾಗಿ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ.1ರ ಸಹ ಶಿಕ್ಷಕ ಎಂ.ಎಂ. ಮೇಗಲಮನಿ, ಉಪಾಧ್ಯಕ್ಷರಾಗಿ ನೀಲಗುಂದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಎಸ್.ಎಂ. ನವಲಿ ಆಯ್ಕೆಯಾಗಿದ್ದಾರೆ.

ಆಡಳಿತ ಮಂಡಳಿಯ ಸದಸ್ಯರಾಗಿ ಯು.ಆಯ್. ಭಜಂತ್ರಿ, ಬಿ.ವಿ. ಹುಡೇದ, ಎಸ್.ಡಿ. ಗುಂಜಳ, ಎಸ್.ಎಂ. ಮಡ್ಡಿಕಾರ, ಆರ್. ಪೂಜಾರ, ಎಸ್.ಬಿ. ಗುಂಜಳ, ಪಿ.ಎಸ್. ಮರಿದೇವರಮಠ, ಬಿ.ಎಸ್. ಜೋಗಿ, ಎಂ.ಎ. ನದಾಫ್, ಕೆ.ಎಸ್. ಗಾಣಿಗೇರ, ಬಿ.ವಿ. ಚಕ್ರಸಾಲಿ ಆಯ್ಕೆಯಾಗಿದ್ದಾರೆ ಎಂದು ಗದಗ ಸಹಕಾರಿ ಸಂಘಗಳ ಸಹಾಯಕ ನಿಬಂಧಕರ ಕಚೇರಿಯ ಅಧೀಕ್ಷಕರಾದ ಶಾಚಿತಾ ಎಚ್.ಎಂ ಪ್ರಕಟಣೆಗೆ ತಿಳಿಸಿದ್ದಾರೆ.

### ಶ್ರೀ ತಾಯಿ ಪಾರ್ವತಿ ಮಕ್ಕಳ ಬಳಗದ ಅಮೃತ ಮಹೋತ್ಸವ ಕಾರ್ಯಕ್ರಮದಲ್ಲಿ ಮುಕ್ತಿಮಂದಿರ ಶ್ರೀಗಳು

# ತೊಟ್ಟಿಲು ತೂಗುವ ಕೈ ಜಗತ್ತನ್ನೇ ಆಳಬಲ್ಲದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಕ್ಕಳಲ್ಲಿನ ಬುದ್ಧಿಶಕ್ತಿ ವಿಕಸನಗೊಳಿಸಿ, ಧರ್ಮ, ಸಂಸ್ಕಾರ ಮತ್ತು ಮಾನವೀಯ ಮೌಲ್ಯಗಳನ್ನು ತುಂಬಿ, ಆತ್ಮಸ್ಥೈರ್ಯವನ್ನು ಗಟ್ಟಿಗೊಳಿ, ಜವಾಬ್ದಾರಿಯುತ ವ್ಯಕ್ತಿಯನ್ನಾಗಿಸುವುದು ಶಿಕ್ಷಣದ ಮೂಲ ಆಶಯವಾಗಿದೆ ಎಂದು ಎಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಹೇಳಿದರು.

ಅವರು ಸೋಮವಾರ ಲಕ್ಷ್ಮೇಶ್ವರದ ಶ್ರೀ ತಾಯಿ ಪಾರ್ವತಿ ಮಕ್ಕಳ ಬಳಗದ ಅಮೃತ ಮಹೋತ್ಸವ ಹಾಗೂ ಬಳಗದ ಪ್ರೌಢಶಾಲೆ ಮತ್ತು ಜ.ರೇಣುಕಾಚಾರ್ಯ ಸಂಸ್ಕೃತ ಪಾಠಶಾಲೆಯ ಸುವರ್ಣ ಮಹೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ದೇಶದ ಇತಿಹಾಸದಲ್ಲಿ ಶಿಕ್ಷಣ ಸೇರಿ ತ್ರಿವಿಧ ದಾಸೋಹಕ್ಕೆ ಮಠ-ಮಾನ್ಯಗಳ ಕೊಡುಗೆ ಅಪಾರ. ನಡೆದಾಡಿದ ದೇವರು ಲಿಂ. ವೀರಗಂಗಾಧರ ಜಗದ್ಗುರುಗಳ ಅಭಯಾಶೀರ್ವಾದದಿಂದ 1946ರಲ್ಲಿ ಮಹಿಳೆಯರ ಕ್ರಿಯಾಶೀಲ ಚಿಂತನೆಗಳಿಂದ ಶ್ರೀ ತಾಯಿ ಪಾರ್ವತಿ ಮಕ್ಕಳ ಬಳಗ ಪ್ರಾರಂಭಗೊಂಡು ಶ್ರೇಷ್ಠ ಚಿಂತನೆಗಳೊಂದಿಗೆ ಶಿಕ್ಷಣದ ಜತೆಗೆ ಧರ್ಮ, ಸಂಸ್ಕಾರ, ಮೌಲ್ಯಗಳನ್ನು ಬಿತ್ತುತ್ತಾ ಲಕ್ಷಾಂತರ ಮಕ್ಕಳ ಬಾಳಿಗೆ ಬೆಳಕಾಗಿ ಅವರನ್ನು ಸುಸಂಸ್ಕೃತ ನಾಗರಿಕರನ್ನಾಗಿಸುತ್ತಿರುವ ಶಿಕ್ಷಣ ಸಂಸ್ಥೆ ಕಾರ್ಯ ಶ್ಲಾಘನೀಯ. ತೊಟ್ಟಿಲು ತೂಗುವ ಕೈ ಜಗತ್ತನ್ನೇ ಆಳಬಲ್ಲದು ಎಂಬುದನ್ನು ಪಾರ್ವತಿ ಬಳಗ ಸಾಬೀತುಪಡಿಸಿದೆ. ಶಿಕ್ಷಣ ಸೇವೆಯೇ ಧ್ಯೇಯವಾಗಿಸಿಕೊಂಡಿರುವ ತಾಯಿ ಪರ್ವತಿ ಮಕ್ಕಳ ಬಳಗದ ಶಿಕ್ಷಣ ಸಂಸ್ಥೆ ಉತ್ತರೋತ್ತರವಾಗಿ ಪ್ರಗತಿ ಹೊಂದಲೆಂಬ ಶುಭಾಶೀರ್ವಚನಗೈದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ವಿ.ಪ ಸದಸ್ಯ ಎಸ್.ವಿ. ಸಂಕನೂರ, ಮಕ್ಕಳಿಗೆ ಪಠ್ಯ ಶಿಕ್ಷಣದೊಂದಿಗೆ ಕೌಶಲ್ಯ, ಜಗತ್ತಿನ ಎಲ್ಲ ಕ್ಷೇತ್ರಗಳ ಜ್ಞಾನ ಬೆಳೆಸಬೇಕಾಗಿದೆ. ಮಕ್ಕಳ ಸರ್ವಾಂಗೀಣ ಬೆಳವಣಿಗೆಗಾಗಿ ಕೇಂದ್ರ ಸರ್ಕಾರ ಜಾರಿಗೊಳಿಸಿದ ಹೊಸ ಶಿಕ್ಷಣ ನೀತಿಯನ್ನು ರಾಜ್ಯ ಸರ್ಕಾರ ತಿರಸ್ಕಾರ ಮಾಡಿರುವುದು ದುರ್ದೈವದ ಸಂಗತಿ. ದೇಶದ ಅಭಿವೃದ್ಧಿ ಶಿಕ್ಷಣದಿಂದ ಮಾತ್ರ ಸಾಧ್ಯ. ಆದರೆ ರಾಜ್ಯದಲ್ಲಿ 57680 ಶಿಕ್ಷಕರ ಮತ್ತು ಅಗತ್ಯ ಸೌಲಭ್ಯಗಳ ಕೊರತೆ ಶಿಕ್ಷಣ ಕ್ಷೇತ್ರದ ಹಿನ್ನಡೆಗೆ ಕಾರಣವಾಗಿದೆ. ಇದು ಒಳ್ಳೆಯ ಬೆಳವಣಿಗೆಯಲ್ಲ. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಮಕ್ಕಳಲ್ಲಿ ಕೌಶಲ್ಯಾಭಿವೃದ್ಧಿ ಹೆಚ್ಚಿಸಿ ಸರ್ವ ಸನ್ನದ್ಧಗೊಳಿಸಬೇಕಾಗಿದೆ. ಈ ನಿಟ್ಟಿನಲ್ಲಿ ಶಿಕ್ಷಕರು, ಪಾಲಕರು ಮತ್ತು ಶಿಕ್ಷಣ ಸಂಸ್ಥೆಗಳ ಪಾತ್ರ ಮಹತ್ವದ್ದಾಗಿದೆ. ಮಕ್ಕಳೂ ಸಹ ಸಾಧಿಸುವ ಛಲದೊಂದಿಗೆ ಶ್ರದ್ಧೆ, ಸತತ ಅಭ್ಯಾಸದ ಮೂಲಕ ಸುಂದರ ಭವಿಷ್ಯ ಕಟ್ಟಿಕೊಳ್ಳುವ ಸಂಕಲ್ಪ ಮಾಡಬೇಕು ಎಂದರು.

ಸಂಸ್ಥೆಯ ಉಪಾಧ್ಯಕ್ಷೆ ಜಯಲಕ್ಷ್ಮೀ ಮಹಾಂತಶೆಟ್ಟರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸಂಸ್ಥೆಯ ಅಧ್ಯಕ್ಷೆ ಸುವರ್ಣಬಾಯಿ ಬಹದ್ದೂರದೇಸಾಯಿ, ಮಾಜಿ ಶಾಸಕರಾದ ಜಿ.ಎಸ್ ಗಡ್ಡದೇವರಮಠ, ಜಿ.ಎಂ. ಮಹಾಂತಶೆಟ್ಟರ, ಡಿ.ಬಿ. ಬಳಿಗಾರ, ರೋಹಿಣಿಬಾಯಿ ಬಹದ್ದೂರದೇಸಾಯಿ, ಲಲಿತಕ್ಕ ಕೆರಿಮನಿ, ಶರಣಮ್ಮ ಲಿಂಬಯ್ಯಸ್ವಾಮಿಮಠ, ಶಿವಲೀಲಾ ಹಿರೇಮಠ, ಗೌರಮ್ಮ ಮಹಾಂತಶೆಟ್ಟರ, ರಾಜೇಶ್ವರಿ ಪಾಟೀಲ ಸೇರಿದಂತೆ ಅನೇಕರಿದ್ದರು. ಸಂಸ್ಥೆಯ ಕಾರ್ಯದರ್ಶಿ ಜಯಲಕ್ಷ್ಮೀ ಗಡ್ಡದೇವರಮಠ ಪ್ರಾಸ್ತಾವಿಕ ನುಡಿದರು. ಶಾರದಾ ಮಹಾಂತಶೆಟ್ಟರ ಸ್ವಾಗತಿಸಿದರು. ತಾಲೂಕಾ ಕಸಾಪ ಅಧ್ಯಕ್ಷ ಈಶ್ವರ ಮೆಡ್ಲೇರಿ, ರಮೇಶ ನವಲೆ, ಶಿಕ್ಷಕರಾದ ದೀಪಾ ಆದಿ, ಜ್ಯೋತಿ ಮುಳಗುಂದ, ಜಗದೀಶ ಶಿರಹಟ್ಟಿ ನಿರೂಪಿಸಿದರು.



ನಿವೃತ್ತ ಪ್ರಧಾನ ಜಿಲ್ಲಾ ನ್ಯಾಯಾಧೀಶರಾದ ಎಸ್.ಬಿ. ವಸ್ತ್ರದಮಠ ಮಾತನಾಡಿ, ಹೆಣ್ಣೊಂದು ಕಲಿತರೆ ಶಾಲೆಯೊಂದು ತೆರೆದಂತೆ ಎಂಬ ಮಾತಿಗೆ ಗುರು-ಹಿರಿಯರ ಆಶೀರ್ವಾದ, ಸಹಕಾರದಿಂದ ಮಹಿಳೆಯರೇ ಕಟ್ಟಿ ಹೆಮ್ಮರವಾಗಿ ಬೆಳೆಸಿ ಸಮಾಜಕ್ಕೆ ಸತ್ಫಲ ನೀಡುತ್ತಿರುವ ತಾಯಿ ಪಾರ್ವತಿ ಮಕ್ಕಳ ಬಳಗದ ಕಾರ್ಯ ಪ್ರಶಂಸನೀಯ ಎಂದರು.

### ಭೂ ದಾಖಲೆಗಳ ಡಿಜಿಟಲೀಕರಣಕ್ಕೆ ಸಚಿವ ಎಚ್.ಕೆ. ಪಾಟೀಲ ಚಾಲನೆ

# ಭ್ರಷ್ಟಾಚಾರ ನಿಯಂತ್ರಣಕ್ಕೆ ಡಿಜಟಲೀಕರಣ ಸಹಕಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ವ್ಯವಸ್ಥೆಯಲ್ಲಿನ ಭ್ರಷ್ಟಾಚಾರ ನಿಯಂತ್ರಣಕ್ಕೆ ದಾಖಲೆಗಳ ಡಿಜಟಲೀಕರಣ ಯೋಜನೆ ಅತ್ಯಂತ ಸಹಕಾರಿಯಾಗಿದೆ. ಕಂದಾಯ ಸಚಿವ ಕೃಷ್ಣ ಬೈರೇಗೌಡ ಡಿಜಟಲೀಕರಣಕ್ಕೆ ವೇಗವನ್ನು ನೀಡಿದ್ದು, ಮೂರು ತಿಂಗಳ ಒಳಗಾಗಿ ಡಿಜಿಟಲಿಕರಣ ವ್ಯವಸ್ಥೆ ಪೂರ್ಣಗೊಳ್ಳುವಂತೆ ಸೂಚನೆ ನೀಡಿದ್ದಾರೆ. ಗದಗ ತಾಲೂಕಿನ ಭೂ ದಾಖಲೆಗಳ ಡಿಜಟಲೀಕರಣ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿಗಳಿಗೆ ಹಾಗೂ ತಹಸೀಲ್ದಾರರುಗಳಿಗೆ ಸೂಚನೆ ನೀಡಲಾಗಿದೆ ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.



ಗದಗ ತಹಸೀಲ್ದಾರರ ಕಚೇರಿಯಲ್ಲಿ ಭೂ ದಾಖಲೆಗಳ ಡಿಜಟಲಿಕರಣಕ್ಕೆ ರವಿವಾರ ಚಾಲನೆ ನೀಡಿ ಅವರು ಮಾತನಾಡಿದರು.

ಭೂ ದಾಖಲೆಗಳನ್ನು ಎ, ಬಿ, ಸಿ, ಡಿ, ಇ, ಎಂದು ವಿಂಗಡಿಸಿ, ದಾಖಲಿಕರಣ ಮಾಡಲಾಗುತ್ತಿದೆ. ತಾಲೂಕಿನಲ್ಲಿ ಎ ಮತ್ತು ಬಿ ರಜಿಸ್ಟರ್‌ಗಳು 27095 ಇದ್ದು, ಒಟ್ಟು 51.74 ಲ ಕ್ಷ ಪುಟಗಳಿವೆ. ಎಲ್ಲ ಹಂತಗಳ ದಾಖಲೆಗಳ ಒಟ್ಟಾರೆ 68.50 ಲಕ್ಷ ಪುಟಗಳಿವೆ. ಅವೆಲ್ಲವನ್ನೂ ಸ್ಕ್ಯಾನ್ ಮಾಡಿ ಸಂರಕ್ಷಣೆ ಮಾಡುವ ಮೂಲಕ ಸುಲಭವಾಗಿ ಸಿಗುವಂತೆ ಕ್ರಮ ವಹಿಸಲಾಗುತ್ತಿದೆ. ಇದೊಂದು ಸರ್ಕಾರದ ಕ್ರಾಂತಿಕಾರಿ ಆಡಳಿತಾತ್ಮಕ ಹೆಜ್ಜೆ ಎಂದು ನುಡಿದರು.

ಸರ್ಕಾರಿ ವ್ಯವಸ್ಥೆಯಲ್ಲಿ ಪಾರದರ್ಶಕತೆ ಜಾರಿಗೊಳಿಸಲು ಹಾಗೂ ವ್ಯವಸ್ಥೆಯನ್ನು ಚುರುಕುಗೊಳಿಸಿ ಕ್ರಿಯಾಶೀಲವಾಗಿಸಲು, ಅಲ್ಲದೆ ದಾಖಲೆಗಳನ್ನು ಶೀಘ್ರ ಸಾರ್ವಜನಿಕರಿಗೆ ತಲುಪಿಸಲು ಈ ದಾಖಲಿಕರಣ ಯೋಜನೆ ಅತ್ಯಂತ ಸಹಕಾರಿಯಾಗಿದೆ. ಭೂ ಸುರಕ್ಷಾ ಯೋಜನೆಯಿಂದ ದಾಖಲೆಗಳು ಸುಭದ್ರ, ಶಾಶ್ವತವಾಗಿಸುವದು, ನೇರ ಸುಲಭವಾಗಿ ಸಾರ್ವಜನಿಕರಿಗೆ ತಲುಪಿಸಲು ಸಾಧ್ಯವಾಗಲಿದೆ. ದಾಖಲೆಗಳ ತಿದ್ದಲು ಕಳೆಯಲು ಅಸಾಧ್ಯ. ತ್ವರಿತ ಆಡಳಿತ ನೀಡಲು ಇದರಿಂದ ಸಾಧ್ಯ ಎಂದು ನುಡಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಗದಗ-ಬೆಟಗೇರಿ ಅವಳಿ ನಗರದ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಚಿ, ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪ ವಿಭಾಗಾಧಿಕಾರಿ ಗಂಗಪ್ಪ ಎಂ, ತಹಸೀಲ್ದಾರ್ ಶ್ರೀನಿವಾಸ್ ಮೂರ್ತಿ ಕುಲಕರ್ಣಿ ಸೇರಿದಂತೆ ಇನ್ನಿತರರು ಹಾಜರಿದ್ದರು.

ಹಳೆಯ ದುಸ್ಥಿತಿಯಲ್ಲಿರುವ ಭೂ ದಾಖಲೆಗಳನ್ನು ಶಾಶ್ವತ ಡಿಜಿಟಲ್ ದಾಖಲೆಗಳಾಗಿ ಪರಿವರ್ತನೆಯಾಗುತ್ತದೆ. ರೆಕಾರ್ಡ್ ರೂಮ್‌ಗಳಿಂದ ಪಡೆದುಕೊಳ್ಳಲು ಇರುವ ತೊಂದರೆಗಳ ನಿವಾರಣೆಯಾಗುತ್ತದೆ. ಹಳೆಯ ದಾಖಲೆಗಳ ಸಂರಕ್ಷಣೆ ಹಾಗೂ ಕಳುವಾಗಲು, ತಿದ್ದಲು ಅಸಾಧ್ಯವಾಗಿದೆ. ಸಾರ್ವಜನಿಕರು ನೇರವಾಗಿ ಪಡೆದುಕೊಳ್ಳುವ ಸೌಲಭ್ಯ ಸಿಗಲಿದೆ. ವಿನಾಕಾರಣ ವಿಳಂಬ, ಅಡೆತಡೆಗಳನ್ನು ಆಲಿಸಿ, ತ್ವರಿತ ಆಡಳಿತ ಸೇವೆಯನ್ನು ಒದಗಿಸುವ ಪ್ರಯತ್ನ ಸರ್ಕಾರದಿಂದ ನಡೆದಿದೆ. ಡಿಜಿಟಲ್ ಸ್ಪರ್ಶದಿಂದ ಉತ್ತಮ ಜನಪರ ಆಡಳಿತ ನಿಮ್ಮ ಭೂ ಒಡೆತನಕೊಂದು ಗ್ಯಾರಂಟಿ ನೀಡಿದಂತಾಗುತ್ತದೆ ಎಂದು ಭೂ ದಾಖಲೆಗಳ ಕುರಿತು ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

# ದುಷ್ಕರ್ಮಿಗಳಿಗೆ ಜೀವಾವಧಿ ಶಿಕ್ಷೆ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಕ್ರಾಂತಿ ಸೇನಾ ಗದಗ ಜಿಲ್ಲಾ ಸಂಘಟನೆ ವತಿಯಿಂದ ಗಜೇಂದ್ರಗಡದ ಸಹೋದರಿ ಖುಷಿ ರಂಗರೇಜ ಆತ್ಮಹತ್ಯೆಯನ್ನು ಖಂಡಿಸಿ ಆತ್ಮಹತ್ಯೆಗೆ ಕಾರಣವಾಗಿರುವ ದುಷ್ಕರ್ಮಿಗಳಿಗೆ ಜೀವಾವಧಿ ಶಿಕ್ಷೆ ನೀಡಬೇಕೆಂದು ಪ್ರತಿಭಟನೆ ನಡೆಸಿ, ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕ್ರಾಂತಿ ಸೇನಾ ಗದಗ ಜಿಲ್ಲಾಧ್ಯಕ್ಷ ಬಾಬು ಬಾಕಳೆ ಮಾತನಾಡಿ, ಗಜೇಂದ್ರಗಡ ಹಿಂದೂ ಸಮಾಜದ ಯುವತಿ ಖುಷಿ ರಂಗರೇಜ್‌ಗೆ ಪ್ರೀತಿಸುವಂತೆ ಕಿರುಕುಳ ನೀಡಿದ್ದರಿಂದ ಅವಳು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಅವಳ ಸಾವಿಗೆ ಕಾರಣರಾದ



ದುಷ್ಟರನ್ನು ಜೀವಾವಧಿ ಶಿಕ್ಷೆ ನೀಡಬೇಕು ಹಾಗೂ ರಾಜ್ಯದಲ್ಲಿ ಹಿಂದೂ ಸಮಾಜದ ಯುವತಿಯರ ಮೇಲೆ ಲವ್ ಜಿಹಾದ್ ಪ್ರಕರಣಗಳು ನಡೆಯುತ್ತಿದ್ದು, ಇದರ ವಿರುದ್ಧ ಪೊಲೀಸ್ ಇಲಾಖೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಶ್ರೀ ರಾಜರಾಜೇಶ್ವರಿ ಮಹಿಳಾಮಂಡಳದ ಅಧ್ಯಕ್ಷೆ ರೇಣುಕಾ ಕಬಾಡಿ, ಕ್ರಾಂತಿ ಸೇನಾ ಗದಗ ಜಿಲ್ಲಾ ಮಹಿಳಾ ಅಧ್ಯಕ್ಷೆ ರಾಣಿ ಚಂದಾವರಿ, ಬಿಜೆಪಿ ಮುಖಂಡರಾದ ಸುಧೀರ್ ಕಟೀಗರ, ರವಿ ಸಿದ್ದಲಿಂಗ, ಪ್ರವೀಣ್, ಭೀಮಾ ಕಟೀಗಾರ್, ಹಬೀಬ, ಭರತ, ನಾರಾಯಣ ಮುಂತಾದವರು ಭಾಗವಹಿಸಿದ್ದರು.



ಲಕ್ಷ್ಮೇಶ್ವರದ ಶ್ರೀ ತಾಯಿ ಪಾರ್ವತಿ ಮಕ್ಕಳ ಬಳಗದ ಅಮೃತ ಮಹೋತ್ಸವ, ಬಳಗದ ಪ್ರೌಢಶಾಲೆ ಮತ್ತು ಜ.ರೇಣುಕಾಚಾರ್ಯ ಸಂಸ್ಕೃತ ಪಾಠಶಾಲೆಯ ಸುವರ್ಣ ಮಹೋತ್ಸವದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ರೂಪಕಗಳ ಮೆರವಣಿಗೆಯಲ್ಲಿ ಮಕ್ಕಳು ಗಮನ ಸೆಳೆದರು.

# ಯಾವ ಮಕ್ಕಳೂ ಶಿಕ್ಷಣದಿಂದ ವಂಚಿತರಾಗದಿರಲಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿಕ್ಷಣ ಸೇವೆಯೇ ದೇವರ ಸೇವೆಯಾಗಿದ್ದು, ಬಡ ಮಕ್ಕಳ ಶಿಕ್ಷಣ ಸೇವೆ ಮಾಡುವ ಕಾರ್ಯದಲ್ಲಿಯೇ ದೇವರನ್ನು ಕಂಡರೆ ಸಂತೃಪ್ತಿ ಸಾಧ್ಯವಾಗುತ್ತದೆ ಎಂದು ಲಕ್ಷ್ಮೇಶ್ವರದ ಉಪನೋಂದಣಾಧಿಕಾರಿ ಎಸ್.ಕೆ. ಜಲರಡ್ಡಿ ಹೇಳಿದರು.

ಅವರು ಪಟ್ಟಣದ ದೊಡ್ಡೂರ ರಸ್ತೆ ಬದಿಯ ಗುಡಿಸಲು ವಾಸಿಗಳ ಮಕ್ಕಳಿಗೆ ಪಟ್ಟಣದ ನೀಲಪ್ಪ ಗುಡ್ಡಪ್ಪ ಶಿರಹಟ್ಟಿ ಸೇವಾ ಸಂಸ್ಥೆ ಹಾಗೂ ಅಡರಕಟ್ಟಿಯ ಶಿವಾಜಪ್ಪ ರಾಮಚಂದ್ರಪ್ಪ ಮರಾಠೆ ಬಳಗ 'ಹಸಿದವರ ಅನ್ನಜೋಳಿಗೆ' ಕಾರ್ಯಕ್ರಮದಡಿ ಕಲಿಕಾ ಸಾಮಗ್ರಿಗಳು ಮತ್ತು ಬಟ್ಟೆ ವಿತರಣಾ ಕಾರ್ಯ ನೆರವೇರಿಸಿ ಮಾತನಾಡಿದರು.

ಸರ್ಕಾರ ಇಂದು ಪ್ರಾಥಮಿಕ ಶಿಕ್ಷಣವನ್ನು ಸಂಪೂರ್ಣ ಉಚಿತವಾಗಿಸಿದೆ. ಬಡತನ, ಅಜ್ಞಾನ, ಅನಕ್ಷರತೆಯ ಕಾರಣದಿಂದ ಯಾವ ಮಕ್ಕಳೂ ಶಿಕ್ಷಣದಿಂದ ವಂಚಿತವಾಗಬಾರದು. ಶಿಕ್ಷಣ ಸೇವೆಗಾಗಿ ಮಠ-ಮಾನ್ಯಗಳು, ಸೇವಾ ಸಂಘಟನೆಗಳು, ಶಿಕ್ಷಣ ಪ್ರೇಮಿ-ದಾನಿಗಳುಳ್ಳ ಸಮಾಜವೂ ಸಿದ್ಧವಿದೆ ಎಂದರು.

ಕಾರ್ಯಕ್ರಮ ಅಧ್ಯಕ್ಷತೆ ವಹಿಸಿದ್ದ ಸಾಹಿತಿ ಸಿ.ಜಿ. ಹಿರೇಮಠ ಮಾತನಾಡಿ, ಬಡತನದಲ್ಲಿಯೂ ಸುನಂದಾ ಕರಿಯಪ್ಪ ಶಿರಹಟ್ಟಿ ದಂಪತಿಗಳ ಸಾಮಾಜಿಕ, ಶೈಕ್ಷಣಿಕ ಸೇವಾ ಶ್ಲಾಘನೀಯ ಎಂದರು.

ಈ ವೇಳೆ ದಾನಿಗಳಾದ ಮಂಜುನಾಥ ಕುರ್ತಕೋಟಿ, ಕರಿಯಪ್ಪ ಶಿರಹಟ್ಟಿ ದಂಪತಿಗಳು, ಡಿ.ಎನ್. ದೊಡ್ಡಮನಿ, ಫಕೀರಪ್ಪ ಭಜಕ್ಕನವರ, ಎಸ್.ಬಿ. ಲಕ್ಷ್ಮೇಶ್ವರ, ಬಸವರಾಜ ಹಿರೇಮನಿ, ಹನಮಂತಪ್ಪ ಹರಿಜನ, ಗಾಳೆಪ್ಪ ಹರಿಜನ, ಗುಡ್ಡಪ್ಪ ಮತ್ತೂರ, ಮಾರ್ತಾಂಡಪ್ಪ ಗಾಳಪ್ಪನವರ, ಮಂಜು ಹರಿಜನ, ಶಿವಾನಂದ ನಡುವಿನಮನಿ, ಬಸವರಾಜ ಮಾದರ, ದಾದಾಪೀರ ಸೊಲ್ಲಾಪುರ, ವಿನೋದ ಶಿರಹಟ್ಟಿ ಹಾಗೂ ಹಿರಿಯರು ಉಪಸ್ಥಿತರಿದ್ದರು. ಬಸವರಾಜ ಯರಗುಪ್ಪಿ, ಪರಮೇಶ್ವರ ಕಾಳಶೆಟ್ಟಿ ಕಾರ್ಯಕ್ರಮ ನಿರ್ವಹಿಸಿದರು.

### ಕೇಂದ್ರ ರಸ್ತೆ ನಿಧಿ ಯೋಜನೆಯಲ್ಲಿ ಕಾಮಗಾರಿಗೆ ಚಾಲನೆ ನೀಡಿದ ಶಾಸಕ ಡಾ. ಚಂದ್ರು ಲಮಾಣಿ

# ರಸ್ತೆಗಳನ್ನು ಮೇಲ್ದರ್ಜೆಗೇರಿಸಲು ಅಗತ್ಯ ಕ್ರಮ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮತಕ್ಷೇತ್ರ ವ್ಯಾಪ್ತಿಯ ಗ್ರಾಮೀಣ ಪ್ರದೇಶಗಳ ರಸ್ತೆಗಳನ್ನು ಸುಧಾರಣೆ ಮಾಡುವುದರ ಜೊತೆಗೆ ರಸ್ತೆಗಳನ್ನು ಮೇಲ್ದರ್ಜೆಗೇರಿಸಿ ಸಾರ್ವಜನಿಕರಿಗೆ ಮುಕ್ತ ಸಂಚಾರಕ್ಕೆ ಅವಕಾಶ ಕಲ್ಪಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಸೋಮವಾರ ಶಿರಹಟ್ಟಿ ತಾಲೂಕಿನ ತೊಳಲಿ ಗ್ರಾಮದಲ್ಲಿ ಕೇಂದ್ರ ರಸ್ತೆ ನಿಧಿ ಯೋಜನೆ ಅಡಿಯ (ಸಿಆರ್‌ಐಎಫ್) 6 ಕೋಟಿ ರೂ ವೆಚ್ಚದಲ್ಲಿ ಗಜೇಂದ್ರಗಡ-ಸೊರಬ ರಾಜ್ಯ ಹೆದ್ದಾರಿ 136 ಕಿ.ಮೀ 134.97ದಿಂದ 136.97ವರೆಗೆ ಹಾಗೂ 181.250ದಿಂದ 206.25ವರೆಗೆ ಆಯ್ದ ಭಾಗಗಳಲ್ಲಿ ರಸ್ತೆ ಸುಧಾರಣೆಗೆ ಚಾಲನೆ ನೀಡಿ ಮಾತನಾಡಿದರು.

ಪ್ರಕೃತಿ ವಿಕೋಪದಿಂದ ಮತಕ್ಷೇತ್ರದಲ್ಲಿ ಹಲವಾರು ರಸ್ತೆಗಳು ಹಾಳಾಗಿದ್ದು, ಇವುಗಳ ಸುಧಾರಣೆಗೆ ಕೇಂದ್ರ ಹಾಗೂ ರಾಜ್ಯ ಸರಕಾರಕ್ಕೆ ಸಂಪೂರ್ಣ ವರದಿಯನ್ನು ಸಲ್ಲಿಸಲಾಗಿತ್ತು. ಹಂತ ಹಂತವಾಗಿ ಅನುದಾನ ಬಿಡುಗಡೆಯಾಗುತ್ತಿದ್ದು, ಆದ್ಯತೆಯ ಮೇರೆಗೆ ಕೆಲಸಗಳನ್ನು ಮಾಡಲಾಗುತ್ತಿದೆ. ಈಗಾಗಲೇ ಹಲವಾರು ಕಡೆಗಳಲ್ಲಿ ಸುಧಾರಣೆ ಕೆಲಸಗಳು ಪ್ರಗತಿಯಲ್ಲಿವೆ. ಮಾಜಿ ಸಿಎಂ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅವರಿಗೂ ಸಹ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಕಾಮಗಾರಿಯನ್ನು ನಿರ್ವಹಿಸುವ ಗುತ್ತಿಗೆದಾರರು ನಿಗದಿತ ಸಮಯದಲ್ಲಿ ಗುಣಮಟ್ಟದ ಕಾಮಗಾರಿಯನ್ನು ಮಾಡಿ ಮುಗಿಸಬೇಕು. ಈ ಹಂತದಲ್ಲಿ ಸಾರ್ವಜನಿಕರು ಇಂತಹ ಅಭಿವೃದ್ಧಿ ಕೆಲಸಗಳಿಗೆ ಸಹಕಾರ ನೀಡಬೇಕು ಎಂದರು.

ಗ್ರಾ.ಪಂ ಅಧ್ಯಕ್ಷ ಫಕ್ಕೀರಪ್ಪ ನರಸಮ್ಮನವರ, ಶಿವನಗೌಡ ಕಂಠೀಗೌಡ್ರ, ಸದಸ್ಯರಾದ ಹೇಮಕ್ಕ ಹಿರೇಮಠ, ನಿಂಗಪ್ಪ ನಾಯ್ಕ, ಮಹೇಶ ತೆಗ್ಗಿನಮನಿ, ಚನ್ನವೀರಗೌಡ ತೆಗ್ಗಿನಮನಿ, ವೀರೇಶ ತಂಗೋಡ, ಸಂತೋಷ ಹಿರೇಮಠ, ಗುತ್ತಿಗೆದಾರ ಬಿರಾದಾರ, ವಿಶ್ವನಾಥ ಪಾಟೀಲ, ಪ್ರಶಾಂತ ಹೊಸಮನಿ ಮುಂತಾದವರು ಉಪಸ್ಥಿತರಿದ್ದರು.



ಶಿರಹಟ್ಟಿ-ಲಕ್ಷ್ಮೇಶ್ವರ-ಮುಂಡರಗಿ ತಾಲೂಕುಗಳು ಸೇರಿದಂತೆ ವಿವಿಧ ಗ್ರಾಮೀಣ ಪ್ರದೇಶಗಳಲ್ಲಿ ಹಾಳಾಗಿರುವ ಎಲ್ಲ ರಸ್ತೆಗಳ ಸುಧಾರಣೆಗೆ 150 ಕೋಟಿ ರೂ.ಗಳ ಪ್ರಸ್ತಾವನೆಯನ್ನು ಸಂಬಂಧಿಸಿದ ಇಲಾಖೆಗಳಿಗೆ ಸಲ್ಲಿಸಲಾಗಿದೆ. ಈಗಾಗಲೇ ಗದಗ-ಹೊನ್ನಾಳಿ ರಾಜ್ಯ ಹೆದ್ದಾರಿ ರಸ್ತೆಯು ಪೂರ್ಣಗೊಳ್ಳುವ ಹಂತದಲ್ಲಿದೆ. ಮತಕ್ಷೇತ್ರದಿಂದ ಜಿಲ್ಲಾ ಕೇಂದ್ರಕ್ಕೆ ತೆರಳಲು ಮುಕ್ತ ಸಂಚಾರವಾಗಲಿದೆ. ಬಾಕಿ ಇರುವ ರಸ್ತೆಗಳನ್ನು ಅನುದಾನ ಬಿಡುಗಡೆಯ ನಂತರ ಕೈಗೊಳ್ಳಲಾಗುವುದು ಎಂದು ಡಾ. ಚಂದ್ರು ಲಮಾಣಿ ತಿಳಿಸಿದರು.


ಕರ್ನಾಟಕ ಸರಕಾರ (ರಾಷ್ಟ್ರೀಯ ಆರೋಗ್ಯ ಅಭಿಯಾನ)
ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ, ಗದಗ
CPHC-UHC ಕಾರ್ಯಕ್ರಮದ ಆಯುಷ್ಮಾನ್ ಆರೋಗ್ಯ ಮಂದಿರ
ಉಪಕೇಂದ್ರ, ಜಿಲ್ಲಾ ಸಮೀಕ್ಷಾ ಘಟಕ, ಗದಗ
ಜಿಲ್ಲಾ ಕಾರ್ಯಕ್ರಮ ನಿರ್ವಹಣಾ ಘಟಕ, ಗದಗ ಫೋ.ನಂ. 233996

ಕ್ರ.ಸಂ:ಜಿಆಕುಕಸೋಗ/ಎನ್.ಹೆಚ್.ಎಮ್/CPHC-UHC-ಟೆಂಡರ್‌ಪ್ರಕಟಣೆ/24-25 ದಿನಾಂಕ : 20.01.2025

ಟೆಂಡರ್ ಪ್ರಕಟಣೆ

2024-25 ನೇ ಸಾಲಿಗೆ ಗದಗ ಜಿಲ್ಲೆಯಲ್ಲಿ ಎನ್.ಹೆಚ್.ಎಮ್ ಕಾರ್ಯಕ್ರಮದಡಿಯಲ್ಲಿ CPHC-UHC ಕಾರ್ಯಕ್ರಮದ ಆಯುಷ್ಮಾನ್ ಆರೋಗ್ಯ ಮಂದಿರ ಉಪಕೇಂದ್ರಗಳಿಗೆ, ಅಗತ್ಯವಿರುವ ವೈದ್ಯಕೀಯ ಸಲಕರಣೆಗಳನ್ನು/ಉಪಕರಣೆಗಳನ್ನು ಹಾಗೂ ಉಪಭೋಗ್ಯ ಸಾಮಗ್ರಿಗಳನ್ನು ಇ-ಪ್ರಕ್ಯೂರ್‌ಮೆಂಟ್ ಮೂಲಕ ಟೆಂಡರ್ ಆಹ್ವಾನಿಸಲಾಗಿದೆ, ಟೆಂಡರ್ ಅಂದಾಜು ಮೊತ್ತ ರೂ. **6.64** ಲಕ್ಷಗಳು ಇ.ಎಮ್.ಡಿ ಮೊತ್ತ ರೂ. **16600/-** ಟೆಂಡರ್ ಸಲ್ಲಿಸಲು ಪ್ರಾರಂಭ ಮತ್ತು ಕೊನೆ ದಿನಾಂಕ : **20/01/2025** ರಿಂದ ಪ್ರಾರಂಭ ಹಾಗೂ **03/02/2025** ರಂದು ಸಂಜೆ 04:30 ಗಂಟೆವರೆಗೆ, ಹೆಚ್ಚಿನ ಮಾಹಿತಿಗಾಗಿ ಇ-ಪ್ರಕ್ಯೂರ್‌ಮೆಂಟ್ ವೆಬ್‌ಸೈಟ್ https://kppp.karnataka.gov.in/ ಮೂಲಕ Tender Reference Number : DHFWS/2024-25/IND1295 ಸಂಖ್ಯೆಯನ್ನು ಬಳಸಿಕೊಂಡು ಪರಿಶೀಲಿಸಬಹುದಾಗಿದೆ. ಅಥವಾ dhogadag@gmail.com/ncdgadag@gmail.com ಸಂಪರ್ಕಿಸಬಹುದಾಗಿದೆ.

ಸಹಿ/- ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಗದಗ

ವಾಸಾಸಂಇ/ಗದಗ/ಕೆಎಸ್‌ಎಂಸಿಎ/544/24-25



ಗ್ರಾಮ ಪಂಚಾಯತ ಕಾರ್ಯಾಲಯ, ವಾಸನ

ತಾ॥ ನರಗುಂದ 582206 ಜಿ॥ ಗದಗ

ಈ-ಮೇಲ್: vasan.nar.gdg@gmail.com

ನಂ: ಗ್ರಾ.ಪಂ.ವಾಸನ/ಟೆಂಡರ/2024-25/02 ದಿನಾಂಕ: 20/01/2025

ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ ನಿಯಮಗಳನ್ವಯ ಅರ್ಹ ಗುತ್ತೇದಾರ/ಸರಬುದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, ಮುಖಾಂತರ 01 ಕಾಮಗಾರಿಯ ಗುಣಮಟ್ಟದ ಸಾಮಗ್ರಿ ಪೂರೈಕೆಯ ಟೆಂಡರನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ: 2024-25ನೇ ಸಾಲಿನ MGNREGA ಯೋಜನೆ ಅಡಿ ಟೆಂಡರನ್ನು ಆಹ್ವಾನಿಸಲಾಗಿದೆ. ಗುತ್ತಿಗೆದಾರ/ಸರಬರಾಜುದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, https://kppp.karnataka.gov.in ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆಗಳು ಈ ಕೆಳಗಿನಂತೆ ಇರುತ್ತವೆ.

| ಕ್ರ.ಸಂ. | ಇಂಡೆಂಟ್ ನಂಬರ | ಟೆಂಡರಿಗಿಟ್ಟ ಮೊತ್ತ |
|---|---|---|
| 1 | RDPR/2024-25/IND5822/CALL-2 | ರೂ. 6,17,819.11 |

ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ: ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ನಂತೆ, ಇ.ಎಂ.ಡಿ. ಸಂಬಂದಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬ್‌ಸೈಟ್‌ನಲ್ಲಿ ಭರ್ತಿಮಾಡಿ ಸಲ್ಲಿಸುವ ದಿನಾಂಕ: 21-01-2025 ರಿಂದ 29-01-2025 ರಂದು 16.30 ಗಂಟೆಯವರೆಗೆ, ಟೆಂಡರ ತೆರೆಯುವ ದಿನಾಂಕ: 31-01-2025 ರಂದು 11.30 ತೆರೆಯಲಾಗುವುದು. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

ಸಹಿ/- ಪಂಚಾಯತ ಅಭಿವೃದ್ಧಿ ಅಧಿಕಾರಿಗಳು
ಗ್ರಾಮ ಪಂಚಾಯತ, ವಾಸನ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka